# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 42 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 18–08–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 42 | Title- Code: KARKAN 28269 | Chitradurga | Date : 18-08-2023 Friday | Page: 4 | Price: Rs. 2-00



ಒಳ ಪುಟದ ಸುದ್ದಿಗಳು

2 ದ್ವಿತೀಯ ಪಿಯುಸಿ 3188 ವಿದ್ಯಾರ್ಥಿಗಳಿಗೆ 7 ಪರೀಕ್ಷಾ ಕೇಂದ್ರಗಳು

3 ಜನರ ಸಮಸ್ಯ ನಿವಾರಣೆಗೆ ಪ್ರಾಮಾಣಿಕ ಯತ್ನ : ಶಾಸಕ ರಘುಮೂರ್ತಿ

4 ಪರಶುರಾಂಪುರವನ್ನು ತಾಲ್ಲೂಕು ಕೇಂದ್ರವನ್ನಾಗಿಸಲು ಸರ್ಕಾರಕ್ಕೆ ಒತ್ತಡ ಭರವಸೆ ಶಾಸಕ



ಸುದ್ದಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್‌ಅಪ್ ನಂ. 9686622252


## ಆರೋಗ್ಯ ಘಟಕದ ಸದುಪಯೋಗ ಪಡೆದುಕೊಳ್ಳಿ – ಕೆ.ಸಿ.ವೀರೇಂದ್ರ ಪಪ್ಪಿ



**ಚಿತ್ರದುರ್ಗ** : ಗಣಿ ಬಾಧಿತ ಪ್ರದೇಶದ ಜನರ ಆರೋಗ್ಯ ಕಾಪಾಡುವ ದೃಷ್ಟಿಯಿಂದ ಜಿಲ್ಲಾ ಖನಿಜ ಘಟಕದ ವತಿಯಿಂದ ಸಂಚಾರಿ ಆರೋಗ್ಯ ಘಟಕ ನೀಡಲಾಗಿದೆ. ಸಾರ್ವಜನಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.

ಚಿತ್ರದುರ್ಗ ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಆವರಣದಲ್ಲಿ ಗುರುವಾರ ಸಂಚಾರಿ ಆರೋಗ್ಯ ಘಟಕದ ವಾಹನಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಸಂಚಾರಿ ಆರೋಗ್ಯ ಘಟಕ ಜನರಿಗೆ ಬಹಳ ಉಪಯುಕ್ತವಾಗಿದೆ. ಇದರ ಮೂಲಕ ಗ್ರಾಮಗಳಿಗೆ ತೆರಳಿ ಆರೋಗ್ಯ ಸೇವೆಯನ್ನು ಒದಗಿಸಲಾಗುತ್ತದೆ. ಇದರಿಂದ ಜನರ ಮನೆ ಬಾಗಿಲಿಗೆ ಆರೋಗ್ಯ ಸೇವೆ ತಲುಪಿಸಲಾಗುತ್ತದೆ. ಈ ಆರೋಗ್ಯ ಘಟಕದಲ್ಲಿ ವೈದ್ಯರು, ಫಾರ್ಮಸಿಸ್ಟ್, ಪ್ರಯೋಗಶಾಲಾ ತಜ್ಞರು, ಶುಶ್ರೂಷಕರು, ವಾಹನ ಚಾಲಕ ಹಾಗೂ ಡಿ ದರ್ಜೆ ನೌಕರರು ಕರ್ತವ್ಯ ನಿರ್ವಹಿಸುತ್ತಾರೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಆರ್.ರಂಗನಾಥ್ ಮಾತನಾಡಿ, ಗಣಿ ಬಾಧಿತ ಪ್ರದೇಶಗಳಲ್ಲಿ ವೈದ್ಯಕೀಯ ಸೇವೆ ನೀಡುವುದರ ಮೂಲಕ, ಸಾರ್ವಜನಿಕರಲ್ಲಿ ಸಾಧಾರಣವಾಗಿ ಕಂಡುಬರುವ ಗಂಭೀರ ಸ್ವರೂಪದ ಕಾಯಿಲೆಗಳಿಗೆ ಸಂಚಾರಿ ಚಿಕಿತ್ಸೆ ಪ್ರಯೋಗಾಲಯಗಳ ಪರೀಕ್ಷೆ ಮಾಡಲಾಗುವುದು. ಜೊತೆ–ಗೆ ಬಾಣಂತಿ ಗರ್ಭಿಣಿಯರ ಆರೈಕೆ, ತಾಯಿ ಮಕ್ಕಳ ಲಸಿಕೆ ಕಾರ್ಯಕ್ರಮ, ಕುಟುಂಬ ಕಲ್ಯಾಣ ಯೋಜನಾ ಅನು?ಾ?ಠನ, ಮಾಹಿತಿ ಶಿಕ್ಷಣ ಸಂವಹನ, ಆರೋಗ್ಯ ಜಾಗತಿಯನ್ನು ಸಂಚಾರಿ ಆರೋಗ್ಯ ಘಟಕದಿಂದ ನಿರ್ವಹಿಸಲಾಗುವುದು. ತುರ್ತು ಸಂದರ್ಭದಲ್ಲಿ ಉನ್ನತ ಮಟ್ಟದ ಆಸ್ಪತ್ರೆಗಳಿಗೆ ರೋಗಿಗಳನ್ನು ನಿರ್ದೇಶನ ಮಾಡಲಾಗುವುದು ಎಂದರು.

ತಾಲೂಕು ಅರೋಗ್ಯ ಅಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ತಾಲೂಕಿನ 46 ಹಳ್ಳಿಗಳಿಗೆ ಕ್ರೀಯಾ ಯೋಜನೆ ಅನುಸಾರ ನಿಗದಿತ ದಿನಾಂಕಗಳಂದು ಸಂಚಾರಿ ಆರೋಗ್ಯ ಘಟಕ ಭೇಟಿ ಆರೋಗ್ಯ ಸೇವೆ ಒದಗಿಸಲಿದೆ ಎಂದರು.

ಕಾರ್ಯಕ್ರಮದಲ್ಲಿ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್, ಬಿ.ಮುಗಪ್ಪ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜೆ.ಆರ್.ಗೌರಮ್ಮ, ಹೆಚ್.ಬಿ.ಪೂಜಾರ್, ಕೆ.ಎ.ಮಾರುತಿ ಪ್ರಸಾದ್, ಗಂಗಾಧ–ರೆಡ್ಡಿ, ರಂಗಾರೆಡ್ಡಿ, ಶ್ರೀಧರ್, ಆಶಾ ಕಾರ್ಯಕರ್ತೆಯರು ಸೇರಿದಂತೆ ಇತರೆ ಸಿಬ್ಬಂದಿ ಇದ್ದರು.

## ಫಾಸ್ಟ್ ನ್ಯೂಸ್

### ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ಹಾಗೂ ಸ್ವಯಂ ಉದ್ಯೋಗಕ್ಕೆ ನೆರವು

**ಚಿತ್ರದುರ್ಗ** : ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯದಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ, 2023–2024ನೇ ಸಾಲಿಗೆ ಅಂತರಾಷ್ಟ್ರಿಯ ಮತ್ತು ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಹಾಗೂ ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ಹಾಗೂ ಸ್ವಯಂ ಉದ್ಯೋಗ ಯೋಜನೆಯಡಿ ಜಿಮ್ ಸ್ಥಾಪನೆಗೆ ಸಲಕರಣೆಗಳನ್ನು ನೀಡಲಾಗುವುದು.

ಪ್ರೋತ್ಸಾಹ ಧನಕ್ಕೆ 2022 ನೇ ವರ್ಷದ ಜನವರಿ 1 ರಿಂದ ಡಿಸೆಂಬರ್ 31 ವರೆಗೆ ಪದವಿ ವಿಜೇತರಾದವರು ಅರ್ಜಿ ಸಲ್ಲಿಸಬಹುದು. ಆಸಕ್ತ ಕ್ರೀಡಾಪಟುಗಳು ಸೆಪ್ಟೆಂಬರ್ 6 ಒಳಗಾಗಿ ಕ್ರೀಡಾ ಇಲಾಖೆಯಿಂದ ಅರ್ಜಿಯನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ, ಸೆಪ್ಟಂಬರ್ 8 ರೊಳಗಾಗಿ ಸಲ್ಲಿಸಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಆಗಸ್ಟ್ 19 ರಂದು ವಿದ್ಯುತ್ ವ್ಯತ್ಯಯ


**ಚಿತ್ರದುರ್ಗ** : ಚಿತ್ರದುರ್ಗ, ಹಿರೆಗುಂಟನೂರು, ಭರಮಸಾಗರ, ಸಿರಿಗೆರೆ, ವಿಜಾಪುರ, ಪಂಡರಹಳ್ಳಿ, ಮಾದನಾಯಕನಹಳ್ಳಿ, ಹೆ.ಡಿ.ಪುರ, ಚಿತ್ರಹಳ್ಳಿ, ಬಾಲೇನಹಳ್ಳಿ, ಹೊಳಲ್ಕೆರೆ, ತುರುವನೂರು, ಜೆಎನ್ ಕೋಟೆ, ಮತ್ತು ಮಲ್ಲಾಡಿಹಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಆಗಸ್ಟ್ 19 ರಂದು ತ್ರೈಮಾಸಿಕಾ ನಿರ್ವಹಣೆ ಕಾರ್ಯ ನಡೆಯಲಿದೆ. ಆದ್ದರಿಂದ ಆಗಸ್ಟ್ 19 ರಂದು ಬಳಿಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ಚಿತ್ರದುರ್ಗ ವಿಭಾಗ ವ್ಯಾಪ್ತಿಯ 220/66/11 ಕೆವಿಯ ಮಾರ್ಗದಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಸಹಕರಿಸುವಂತೆ ಬೆಸ್ಕಾಂ ಚಿತ್ರದುರ್ಗ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಸ್ವಾತಂತ್ರ್ಯ ಹೋರಾಟದಲ್ಲಿ ವೀರಮರಣ ಹೊಂದಿದ ಯೋಧರಿಗೆ ಶಿಲಾಫಲಕ ಸಮರ್ಪಣೆ

**ಹೊಸದುರ್ಗ** : ಪಟ್ಟಣದ ಜ್ಯೂನಿಯರ್ ಕಾಲೇಜು ಅವರಣದಲ್ಲಿ ಮಂಗಳವಾರ ಅಯೋಜಿಸಿದ್ದ ಸ್ವಾತಂತ್ರ್ಯ ದಿನಾಚರಣೆ ಸಂಧರ್ಭದಲ್ಲಿ ವೇದಿಕೆ ಮುಂಭಾಗದಲ್ಲಿ 5*3 ಅಡಿ ಅಳತೆಯ ಸ್ಮಾರಕವನ್ನು ಸ್ಥಾಪನೆ ಮಾಡಲಾಗಿರುವ ಶಿಲಾ ಫಲಕವನ್ನು ಶಾಸಕ ಬಿ.ಜಿ ಗೋವಿಂದಪ್ಪ ಉದ್ಘಾಟನೆ ಮಾಡಿ ಮಾತೃ ಭೂಮಿಯ ಘನತೆ ಹಾಗೂ ಸ್ವಾತಂತ್ರ್ಯ ಕಾಪಾಡಲು ತಮ್ಮ ಪ್ರಾಣ ತ್ಯಾಗ ಮಾಡಿದ ವೀರರಿಗೆ ಪ್ರಣಮಗಳನ್ನು ಸಲ್ಲಿಸಿ ರಾಷ್ಟ್ರಪ್ರೇಮ ಮೆರೆಯಲು ಸಾರ್ವಜನಿಕರಿಗೆ ಸಂದೇಶ ನೀಡಿದರು.

ಪುರಸಭೆ ಮುಖ್ಯಾಧಿಕಾರಿ ಜಿ.ವಿ ತಿಮ್ಮರಾಜು ಮಾತನಾಡಿ ಘನ ಸರ್ಕಾರ ಸುತ್ತೋಲೆ ಹೊರಡಿಸಿ ನನ್ನ ಮಣ್ಣು ನನ್ನ ದೇಶ ಕಾರ್ಯಕ್ರಮದಡಿ ಸ್ಮಾರಕ ಸ್ಥಾಪನೆಮಾಡಲು ಜಿಲ್ಲಾಧಿಕಾರಿ ಕಚೇ–ರಿಯ ಯೋಜನಾ ನಿರ್ದೇಶಕರಾದ ಮಹೇಂದ್ರಕುಮಾರ್ ವಿಡೀಯೋ ಸಂವಾದ ನಡೆಸಿ ನನ್ನ ಮಣ್ಣು ನನ್ನ ದೇಶ ಕಾರ್ಯಕ್ರಮದಡಿ ವಿವಿಧ ಕಾರ್ಯಕ್ರಮಗಳಾದ ಪಂಚಪ್ರಾಣ ಪ್ರತಿಜ್ಞೆ, ವಸುಧಾ ವಂದನೆ ಹಾಗೂ ವೀರಯೋಧರಿಗೆ ವಂದನೆಗಳನ್ನು ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಯೋಗದೊಂದಿಗೆ ಅಯೋಜನೆ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ತಹಶೀಲ್ದಾರ್ ಪಾಲಯ್ಯ, ಬಿಇಓ ಮೋಸಿನ್, ಸಹಾಯಕ ನಿರ್ದೇಶಕರು ಕ್ರೀಡಾ ಇಲಾಖೆ ಮಹಂತೇಶ್, ಪುರಸಭಾ ಮಾಜಿ ಉಪಾದ್ಯಕ್ಷೆ ಜ್ಯೋತಿಕೆಂಚಪ್ಪ ಸದಸ್ಯರಾದ ದೊಡ್ಡಯ್ಯ, ಜಾಫರ್ ಸಾದಿಕ್, ರಾಮಚಂದ್ರಪ್ಪ, ಶಂಕರಪ್ಪ , ಪುಷ್ಪಗಂಗಾಧರ್, ದಾಳಿಂಬೆ ಗಿರೀಶ್ ಮತ್ತು ಡಾ: ಸ್ವಾತಿಪ್ರದೀಪ್ ಹಾಜರಿದ್ದರು.



ಹೊಸದುರ್ಗ ಪಟ್ಟಣದ ಜ್ಯೂನಿಯರ್ ಕಾಲೇಜು ಅವರಣದಲ್ಲಿ ಮಂಗಳವಾರ ಅಯೋಜಿಸಿದ್ದ ಸ್ವಾತಂತ್ರ್ಯ ದಿನಾಚರಣೆ ಸಂಧರ್ಭದಲ್ಲಿ ವೇದಿಕೆ ಮುಂಭಾಗದಲ್ಲಿ 5*3 ಅಡಿ ಅಳತೆಯ ಸ್ಮಾರಕವನ್ನು ಸ್ಥಾಪನೆ ಮಾಡಲಾಗಿರುವ ಶೀಲಾ ಫಲಕವನ್ನು ಶಾಸಕ ಬಿ.ಜಿ ಗೋವಿಂದಪ್ಪ ಉದ್ಘಾಟನೆ ಮಾಡಿದರು. ಸ್ವಾತಂತ್ರ್ಯ ಹೋರಾಟದಲ್ಲಿ ವೀರಮರಣ ಹೊಂದಿದ ಯೋಧರಿಗೆ ಶಿಲಾಫಲಕ ಸಮರ್ಪಣೆ

## ಪಂಜಿನ ಮೆರವಣಿಗೆ ಮೂಲಕ ಜನಜಾಗೃತಿ, ಜಾಥಾಕ್ಕೆ ಶಾಸಕ ಕೆ.ಸಿ.ವೀರೇಂದ್ರ ಹಾಗೂ ಜಿಲ್ಲಾಧಿಕಾರಿ ಚಾಲನೆ



**ಚಿತ್ರದುರ್ಗ** : ಪ್ರತಿಯೊಬ್ಬರು ಶುದ್ಧ ಕುಡಿಯುವ ನೀರು ಸೇವಿಸಬೇಕು. ತಮ್ಮ ಸುತ್ತಮುತ್ತಲಿನ ಪರಿಸರ ಸ್ವಚ್ಚತೆ ಕಾಪಾಡಿಕೊಳ್ಳುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮನವಿ ಮಾಡಿದರು.

ನಗರದ ಒನಕೆ ಓಬವ್ವ ವೃತ್ತದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪರಿಸರ ನೈರ್ಮಲ್ಯ ಮತ್ತು ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆ ಕಾಪಾಡಿಕೊಳ್ಳುವ ಕುರಿತು ಜನಜಾಗೃತಿ ಸಪ್ತಾಹದ ಅಂಗವಾಗಿ ಪಂಜಿನ ಮೆರಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ನೈರ್ಮಲ್ಯ ಮತ್ತು ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆ ಕಾಪಾಡಿಕೊಳ್ಳುವ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು. ಜನರು ಶುದ್ಧವಾದ ಕುಡಿಯುವ ನೀರು ಸೇವಿಸಬೇಕು ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ, ಕುಡಿಯುವ ನೀರು ಮತ್ತು ವೈಯಕ್ತಿಕ ಸ್ವಚ್ಛತೆಯ ಕುರಿತು ಜಿಲ್ಲೆಯ ಜನರಿಗೆ ಸಪ್ತಾಹದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಹಲವಾರು ವಿನೂತನ ಕಾರ್ಯಕ್ರಮಗಳ ಮೂಲಕ ಜನರಿಗೆ ಅರಿವು ಮೂಡಿಸಲಾಗುತ್ತಿದೆ. ಜಿಲ್ಲೆಯ ಜನರು ಕುಡಿಯುವ ನೀರಿನ ಬಗ್ಗೆ ಹೆಚ್ಚಿನ ಮಾಹಿತಿ ಪಡೆಯಬೇಕು ಎಂಬುದು ಸಪ್ತಾಹದ ಉದ್ದೇಶವಾಗಿದೆ ಎಂದರು.


ನಗರದ ಒನಕೆ ಓಬವ್ವ ವೃತ್ತದಿಂದ ಪ್ರಾರಂಭವಾದ ಪಂಜಿನ ಮೆರವಣಿಗೆಯು ಮದಕರಿ ವೃತ್ತ, ಅಂಬೇಡ್ಕರ್ ವೃತ್ತ ಹಾಗೂ ಬಿ.ಡಿ.ರಸ್ತೆಯಲ್ಲಿ ಮೆರವಣಿಗೆ ನಡೆಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಹನುಮಂತಪ್ಪ, ಶಿಶುಅಭಿವೃದ್ಧಿ ಯೋಜನಾಧಿಕಾರಿ ಲೋಕೇಶ್ವರಪ್ಪ, ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಸಹಾಯಕರು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಸೇರಿದಂತೆ ಮತ್ತಿತರರು ಇದ್ದರು.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

# ಜನರ ಸಮಸ್ಯೆ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ : ಶಾಸಕ ರಘುಮೂರ್ತಿ



ಚಳ್ಳಕೆರೆ ತಾಲ್ಲೂಕಿನ ಪರಶುರಾಮಪುರ ಸರ್ಕಾರಿ ಹಿರಿಯ ಪ್ರಾಥಮಿಕ ಆವರಣದಲ್ಲಿ ತಾಲ್ಲೂಕು ಆಡಳಿತ ಹಮ್ಮಿಕೊಂಡಿದ್ದ ಜನಸಂಪರ್ಕ ಸಭೆಯನ್ನು ಶಾಸಕ ಟಿ.ರಘುಮೂರ್ತಿ ಉದ್ಘಾಟಿಸಿದರು.

**ಚಳ್ಳಕೆರೆ :** ಜನಸಾಮಾನ್ಯರ ಸಮಸ್ಯೆಗಳ ನಿವಾರಣೆ ಮತ್ತು ಪರಿಹಾರ ರೂಪಿಸಲು ಸರ್ಕಾರ ತಾಲ್ಲೂಕು ಆಡಳಿತದ ಮೂಲಕ ಜನಸೇವೆಗೆ ಮುಂದಾಗಿದ್ದು, ಕೆಲವೊಮ್ಮೆ ಯಾವುದೇ ನಿರ್ದೇಶನವಿಲ್ಲದೆ ಜನಸಾಮಾನ್ಯರ ತಮ್ಮ ಸಮಸ್ಯೆಗಳನ್ನು ಹೊತ್ತು ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸಲು ಜನಸಂಪರ್ಕದ ಮೂಲಕ ಅವರಿಗೆ ಪರಿಹಾರ ಒದಗಿಸುವ ಸರ್ಕಾರ ಜನಸಂಪರ್ಕ ಸಭೆ ಜನರಿಗೆ ಹೆಚ್ಚು ಉಪಯುಕ್ತವಾಗಬೇಕು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕಿನ ಪರಶುರಾಮಪುರ ಸರ್ಕಾರಿ ಹಿರಿಯ ಪ್ರಾಥಮಿಕ ಆವರಣದಲ್ಲಿ ತಾಲ್ಲೂಕು ಆಡಳಿತ ಹಮ್ಮಿಕೊಂಡಿದ್ದ ಜನಸಂಪರ್ಕ ಸಭೆಯನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಈಗಾಗಲೇ ತಾಲ್ಲೂಕು ಆಡಳಿತಕ್ಕೆ ನಿರ್ದೇಶನ ನೀಡಿದ್ದು, ಪ್ರತಿನಿತ್ಯ ವಿವಿಧ ಸಮಸ್ಯೆ ಹೊತ್ತು ಸರ್ಕಾರಿ ಕಚೇರಿಗೆ ಬರುವ ರೈತರು, ಕಾರ್ಮಿಕ, ಸಾರ್ವಜನಿಕರಿಗೆ ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರದಲ್ಲೇ ಪರಿಹಾರವನ್ನು ಒದಗಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಸರ್ಕಾರದ ನಿರ್ದೇಶನದಂತೆ ಜನಸಂಪರ್ಕ ಸಭೆಯಲ್ಲಿ ತಾಲ್ಲೂಕಿನ ಎಲ್ಲಾ ಅಧಿಕಾರಿಗಳು ಹಾಜರಿದ್ದು ಜನರ ಸಮಸ್ಯೆಗಳಿಗೆ ಪರಿಹಾರವನ್ನು ರೂಪಿಸಲು ನಿರ್ದೇಶನ ನೀಡಲಾಗಿದೆ. ತಾಲ್ಲೂಕು ಆಡಳಿತದಿಂದ ಜನರಿಗೆ ಸಮಸ್ಯೆಗೆ ಪರಿಹಾರ ತ್ವರಿತಗತಿಯಲ್ಲಿ ಸಿಗಲಿದೆ ಆದ–ರೆ ಕೆಲವೊಂದು ಸಮಸ್ಯೆಗೆ ಸರ್ಕಾರವೇ



ಸ್ಪಂದಿಸಬೇಕು. ರೈತರ ಬೆಳೆ ನಷ್ಟ, ಬೆಳೆ ವಿಮೆ ಕುರಿತಂತೆ ಸರ್ಕಾರ ಈ ಸಮಸ್ಯೆ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ಪ್ರಸ್ತುತ ತಾಲ್ಲೂಕಿನಲ್ಲಿ ಸಕಾಲದಲ್ಲಿ ಮಳೆಯಾಗದೆ ಬಿತ್ತನೆ ಕಾರ್ಯ ಕುಂಠಿತವಾಗಿದ್ದು, ಈ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದರು.

ಜನಸಂಪರ್ಕ ಸಭೆಯಲ್ಲಿ ನಿವೇಶನ, ಮನೆ, ಪೌಡಿ, ಸಾಮಾಜಿಕ ಭದ್ರತಾ ಯೋಜನೆ ಪಿಂಚಣಿಯ ಬಗ್ಗೆ ಸಾರ್ವಜನಿಕರು ಆಹವಾಲುಗಳನ್ನು ಸಲ್ಲಿಸಿದರು. ಶಾಸಕ ಟಿ.ರಘುಮೂರ್ತಿ ಜನರ ಆಹವಾಲುಗಳನ್ನು ತಾಲ್ಲೂಕು ಆಡಳಿತ ಗಂಭೀರವಾಗಿ ಪರಿಗಣಿಸುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಡಿವೈಎಸ್ಪಿ ರಾಜಣ್ಣ, ಕೃಷಿ ಅಧಿಕಾರಿ ಜೆ.ಅಶೋಕ್, ತೋಟಗಾರಿ–ಕೆ ಅಧಿಕಾರಿ ವಿರೂಪಾಕ್ಷಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಜಗಲೂರಸ್ವಾಮಿ, ಉಪಾಧ್ಯಕ್ಷೆ ಸರೋಜಮ್ಮ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಕಾಂಗ್ರೆಸ್ ಮುಖಂಡ ಜಯವೀರಚಾರಿ, ಚನ್ನಕೇಶವ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಶ್ರೀಗಳಿಗೆ ಮಾತೃ ವಿಯೋಗ



ಚಿತ್ರದುರ್ಗದ ಶಿವಶರಣ ಮಾದಾರ ಚನ್ನಯ್ಯ ಮಠದ ಶ್ರೀ. ಮಾದಾರ ಚನ್ನಯ್ಯಶ್ರೀಗಳ ತಾಯಿ ಗಂಗಮ್ಮ (85) ನಿಧನ. ವಯೋಸಹಜ ಅನಾರೋಗ್ಯದಿಂದ ಗಂಗಮ್ಮ(85) ಕೊನೆಯುಸಿರು. ಹಿರೇಕಂದವಾಡಿ ಗ್ರಾಮದ ಜಮೀನಲ್ಲಿ ಇಂದು ಅಂತ್ಯಸಂಸ್ಕಾರ. ಚಿತ್ರದುರ್ಗ ಜಿಲ್ಲೆ ಹೊಳಲ್ಕೆರೆ ತಾಲೂಕಿನ ಹಿರೇಕಂದವಾಡಿ ಗ್ರಾಮ.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ :** ಶ್ರೀ ಮಡಿವಾಳ ಮಾಚಿದೇವ ಸಂಘ, ಜಿಲ್ಲಾ ಸಮಿತಿಯಿಂದ ಜಿಲ್ಲೆಯಲ್ಲಿನ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಎಸ್‌ಎಸ್‌ಎಲ್‌ಸಿ ಹ ಆಗೂ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.60ರಷ್ಟು ಅಂಕಗಳಿಗಿಂತ ಮೇಲ್ಪಟ್ಟು ಉತ್ತೀರ್ಣರಾದ ಮಡಿವಾಳ ಸಮಾಜದ ವಿದ್ಯಾರ್ಥಿಗಳಿಂದ 2022–23ನೇ ಸಾಲಿನ ಪ್ರತಿಭ ಪುರಸ್ಕಾರ ನೀಡಲಾಗುವುದು. ಅರ್ಹ ಅಭ್ಯರ್ಥಿಗಳು ಆಗಸ್ಟ್ 25ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದು.

ಅರ್ಜಿ ಸಲ್ಲಿಸುವ ವಿಳಾಸ: ಅಧ್ಯಕ್ಷರು ಶ್ರೀ ಮಡಿವಾಳ ಮಾಚಿದೇವ ಸಂಘ, ಮಾಚಿದೇವ ಸಮುದಾಯ ಭವನ, 1ನೇ ಮುಖ್ಯ ರಸ್ತೆ, 17ನೇ ತಿರುವು, ವಿನೋಬ ನಗರ, ದಾವಣಗೆರೆ–577006 ಇಲ್ಲಿಗೆ ನೀಡಬೇಕು.

ಅರ್ಹ ವಿದ್ಯಾರ್ಥಿಗಳು ಸ್ವ ಅರ್ಜಿಯೊಂದಿಗೆ ಅಂಕಪಟ್ಟಿ, ವರ್ಗಾವಣೆ ಪತ್ರ (ಟಿ.ಸಿ.), ಜಾತಿ ಪ್ರಮಾಣ ಪತ್ರಗಳ ಜೆರಾ–ಕ್ಸ್ ಪ್ರತಿಗಳು ಹಆಗೂ ಇದರೊಂದಿಗೆ 2 ಪಾಸ್‌ಪೋರ್ಟ್ ಅಳತೆಯ ಫೋಟೋಗಳನ್ನು ಲಗತ್ತಿಸಿ ನೀಡಬೇಕು. ಹೆಚ್ಚಿನ ಮಾಹಿತಿಗೆ 98440 01462, 99454 25565, 88670 60254, 99800 87033 ಇಲ್ಲಿಗೆ ಸಂಪರ್ಕಿಸುವಂತೆ ಅಧ್ಯಕ್ಷರು, ಕಾರ್ಯದರ್ಶಿ ಕೋರಿದ್ದಾರೆ.

### 108ನೇ ಜನ್ಮ ದಿನಾಚರಣೆ

**ದಾವಣಗೆರೆ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಸಾಮಾಜಿಕ ಪರಿವರ್ತನೆಯ ಹರಿಕಾರ ಡಿ. ದೇವರಾಜ ಅರಸುರವರ 108ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಬೆಳಿಗ್ಗೆ 10.30 ಗಂಟೆಗೆ ಕಾರ್ಯಕ್ರಮ ಉದ್ಘಾಟಿಸಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಜಿ.ಎಂ. ಸಿದ್ದೇಶ್ವರ, ವಿಧಾನಸಭಾ ಸದಸ್ಯರಾದ ಡಾ. ಶಾಮನೂರು ಶಿವಶಂಕರಪ್ಪ, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ, ರವಿಕುಮಾರ್ ಎನ್, ಡಾ. ತೇಜಸ್ವಿನಿಗೌಡ, ಎಸ್.ಎಲ್ ಭೋಜೇಗೌಡ, ವೈ.ಎ. ನಾರಾಯಣಸ್ವಾಮಿ, ಚಿದಾನಂದ. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಅರುಣ್ ಕೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಮಹಾನಗರಪಾಲಿಕೆ ಆಯುಕ್ತೆ ಶ್ರೀಮತಿ ರೇಣುಕಾ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಗಾಯಿತ್ರಿ ಕೆ.ಹೆಚ್ ಉಪಸ್ಥಿತರಿರುವರು.

### 37 ಪ್ರಕರಣ ದಾಖಲು

**ಚಿತ್ರದುರ್ಗ :** ಮೊಳಕಾಲ್ಮೂರು ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ದಾಳಿ ಮಾಡಿ ದಂಡ ವಿಧಿಸಿದೆ.

ತಂಬಾಕು ದಾಳಿಯಲ್ಲಿ ತಾಲ್ಲೂಕು ಮಟ್ಟದ ತನಿಖಾ ತಂಡದ ಅಧಿಕಾರಿಗಳಾದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಮೊಳಕಾಲ್ಮೂರು ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎನ್.ಮುನಿಸ್ವಾಮಿ, ಪಟ್ಟಣ ಪಂಚಾಯಿತಿ ಆರೋಗ್ಯ ನಿರೀಕ್ಷಣಾಧಿಕಾರಿ ಟಿ.ರವಿಕುಮಾರ್, ಹೆಡ್‌ಕಾನ್‌ಸ್ಟೇಬಲ್ ಕೆ.ಪಿ.ಶ್ರೀಧರ್ ಇದ್ದರು.

# ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಕ್ರೀಡೆ ಮುಖ್ಯ



**ಮೊಳಕಾಲ್ಮೂರು :** ಕ್ರೀಡಾ ಮನೋಭಾವನೆ ಪ್ರತಿಯೊಬ್ಬ ಮಕ್ಕಳಲ್ಲಿ ಬೆಳೆಯಬೇಕು, ಯಾವ ವಿದ್ಯಾರ್ಥಿ ಆಟ ಪಾಠ ಊಟವನ್ನು ಉತ್ತಮ ರೀತಿಯಲ್ಲಿ ಬಳಸಿ ಕೊಳ್ಳುತ್ತಾರೋ ಅಂತಹ ವಿದ್ಯಾರ್ಥಿಗಳು ಅವರ ಜೀವನದಲ್ಲಿ ಮುಂದೆ ಬರಲು ಸಾಧ್ಯ ವಾಗುತ್ತದೆ. ಎಂದು ನಾಗಸಮುದ್ರ ಗ್ರಾಮದ ಗುತ್ತಿಗೆದಾರರು ಹಾಗೂ ಏಕಲವ್ಯ ಪ್ರಾಥಮಿಕ ಶಾಲೆಯ ನಿರ್ದೇಶಕರಾದ ಎನ್. ಬಿ. ಗೋವಿಂದಪ್ಪ ತಿಳಿಸಿದರು.

ತಾಲ್ಲೂಕಿನ ನಾಗಸಮುದ್ರ ಗ್ರಾಮದಲ್ಲಿ ರಾಂಪುರ ವಲಯ ಮಟ್ಟದ ಕ್ರೀಡಾಕೂಟವನ್ನು ಶಾಟ್ ಪುಟ್ ( ಗುಂಡು) ಎಸೆಯುವ ಮೂಲಕ ಉದ್ಘಾಟನೆ ಮಾಡಿ ಮಾತನಾಡಿದರು.

ಕ್ರೀಡೆಗಳಲ್ಲಿ ಹೆಚ್ಚಿನ ಆಸಕ್ತಿ ಹೊಂದಿರುವ ಮಕ್ಕಳು ಅವರ ಜೀವನದಲ್ಲಿ ನಾಯಕ ಗುಣಗಳನ್ನು ಬೆಳೆಸಿಕೊಳ್ಳುತ್ತಾರೆ ಹಾಗೂ ರಾಜಕೀಯವಾಗಿ ಶೈಕ್ಷಣಿಕವಾಗಿ ಮುಂದೆ ಬರಲು ಸಾಧ್ಯ ವಾಗುತ್ತದೆ. ಪಿ ಟಿ ಉಷಾ, ವಿರಾಟ್ ಕೊಹ್ಲಿಯ ರಂತಹ ಅನೇಕ ಕ್ರೀಡಾ ಪಟುಗಳು ಇಂದು ಅಂತರ್ ರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಪ್ರತಿಭೆಯನ್ನು ಗುರುತಿಸಿದ್ದಾರೆ. ನಮ್ಮ ಹಳ್ಳಿಗಳಲ್ಲಿಯೂ ಸಹ ಅಂತಹ ಪ್ರತಿಭೆಯುಳ್ಳ ವಿದ್ಯಾರ್ಥಿಗಳು ಇದ್ದಾರೆ ಗುರುತಿಸುವ ಕೆಲಸ ಇಂತಹ ಕ್ರೀಡಾಕೂಟಗಳಿಂದ ಮಾತ್ರ ಸಾಧ್ಯವಾಗುತ್ತದೆ. ಕ್ರೀಡಾಕೂಟದಲ್ಲಿ ಭಾಗವಹಿಸುವ ಪ್ರತಿಯೊಬ್ಬ ಕ್ರೀಡಾಪಟುಗಳು ಸಕರಾತ್ಮವಾಗಿ ಸೋಲು ಗೆಲುವುಗಳನ್ನು ಸಮಾನಾಗಿ ತೆಗೆದು ಕೊಳ್ಳಬೇಕು. ಇಂದಿನ ಸೋಲುಗಳೇ ನಾಳಿನ ಗೆಲುವಿಗೆ ಅಡಿಪಾಯ ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ನಾಗಸಮುದ್ರ ಗ್ರಾಮ ಪಂಚಾಯತಿ ಅಧ್ಯಕ್ಷರು ತಿಪ್ಪಮ್ಮ ಕೋಂ ಹನುಮಯ್ಯ ಕ್ರೀಡಾ ಜ್ಯೋತಿ ಸ್ವೀಕರಿಸಿ ಕ್ರೀಡಾಕೂಟವನ್ನು ಉದ್ಘಾಟನೆ ಮಾಡಿದರು. ನಾಗಸಮುದ್ರ ಗ್ರಾಮ ಪ್ರೌಢ ಶಾಲೆ ಆವರಣದಲ್ಲಿ ಇಂದು ವಿದ್ಯಾರ್ಥಿ ವಿದ್ಯಾರ್ಥಿನಿಯರಿಂದ ಕಾಗೋಳಿಸುತ್ತಿತ್ತು. ಕ್ರೀಡಾಕೂಟದಲ್ಲಿ ರಾಂಪುರ ವಲಯ ಮಟ್ಟದ 19 ಪ್ರೌಢ ಶಾಲೆಗಳ ವಿದ್ಯಾರ್ಥಿ ವಿದ್ಯಾರ್ಥಿನಿಯರು ವಿವಿಧ ಕ್ರೀಡೆಗಳಾದ ವಾಲಿಬಾಲ್, ತೆ–ಥ್ರೋ ಬಾಲ್, ಖೋಖೊ, ಕಬ್ಬಡಿ, ರನ್ನಿಂಗ್, ಶಾಟ್ ಪುಟ್, ಲಾಂಗ್ ಜಂಪ್ ಹೀಗೆ ಹತ್ತು ಹಲವು ಕ್ರೀಡೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ಸಂಭ್ರಮಿಸಿದರು.

ಸಂದರ್ಭದಲ್ಲಿ ಸಣ್ಣ ಯಲ್ಲಪ್ಪ ನೌಕರರ ಸಂಘದ ಗೌರವ ಅಧ್ಯಕ್ಷರು, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರು ಗೋವಿಂದಪ್ಪ, ಹೊನ್ನೂರಪ್ಪ ಎಸ್ ಡಿ ಎಂ ಸಿ ಅಧ್ಯಕ್ಷರು, ಓಂಕಾರಪ್ಪ ಈ ಸಿ ಓ ,ಲೋಹಿತ್ ಈ ಸಿ ಓ ರವಿ ಟಿ ಪಿ ಈ ಸಿ ಓ, ಪ್ರದೀಪ್, ಗಂಗಾಧರ್ ನಾಗಭೂಷಣ್, ಹನುಮಂತ, ತಿಪ್ಪೇಸ್ವಾಮಿ, ಮಾರನಾಯಕ ವಾಲ್ಮೀಕಿ ಗ್ರಾಮೀಣ ಅಭಿವೃದ್ಧಿ ಸಂಘದ ಅಧ್ಯಕ್ಷರು, ಇಸಾಕ್ ದೇವೇಂದ್ರ ಶಬ್ಬೀರ್,ಶಾಹೀನಾ ಬಾನು, ಡಾ ಹುಸೇನ್ ಭಾಷಾ, ಶಕೀಲ್ ಅಹಮದ್ ನಾಗಸಮುದ್ರ ಪ್ರಭಾರಿ ಮುಖ್ಯ ಶಿಕ್ಷಕರು, ಜಾಕೀರ್ ಹುಸೇನ್ ಜಿಲ್ಲಾ ಸಂಘಟನಾ ಕಾರ್ಯಧರ್ಶಿ ವೀರಪ್ಪ ದೈಹಿಕ ಶಿಕ್ಷಕರು ಆಂಜನೇಯ ದೈಹಿಕ ಶಿಕ್ಷಕರು ತಿಪ್ಪೇರುದ್ರಪ್ಪ ದೈಹಿಕ ಶಿಕ್ಷಕರು, ಗಂಗಾಧರ್ ದೈಹಿಕ ಶಿಕ್ಷಕರು, ತಿಪ್ಪೇರುದ್ರಪ್ಪ ದೈಹಿಕ ಶಿಕ್ಷಕರು, ಪ್ರಸನ್ನಕುಮಾರ್, ಮಾರಣ್ಣ ಪ್ರದೀಪ್, ಸಿದ್ದಪ್ಪ ಪ್ರೌಢ ಶಾಲೆ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷರು ರಾಮಯ್ಯ ಶಿಕ್ಷಕರು, ರಾಜಶೇಖರ್ ಸಮಾಜ ವಿಜ್ಞಾನ ಶಿಕ್ಷಕರು ಭಾಗವಹಿಸಿದ್ದರು.

# ಹಸಿರು ನಗರವನ್ನಾಗಿಸಲು ಶ್ರಮಿಸಿ : ಸುರೇಶ್

**ದಾವಣಗೆರೆ :** ಮರ, ಗಿಡಗಳನ್ನು ನೆಡುವುದಷ್ಟೇ ಅಲ್ಲದೇ ನಿರ್ವಹಣೆಯು ಕೂಡ ನಮ್ಮೆಲ್ಲರ ಆದ್ಯ ಕರ್ತವ್ಯವಾಗಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದರು.

ಗುರುವಾರ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜಿಲ್ಲಾಡಳಿತ, ಮಹಾನಗರ ಪಾಲಿಕೆ ಹಾಗೂ ಮೆ.ಕಾರ್ಗಿಲ್ ಇಂಡಿಯಾ ಪ್ರೈ.ಲಿ. ಬೆಳ್ಳೂಡಿ ಇವರ ಸಹಯೋಗದೊಂದಿಗೆ ನಗರದ ತುಂಗಭದ್ರ ಬಡಾವಣೆ ಭಾಗ–1, ಕೆ.ಹೆಚ್.ಬಿ ಕಾಲೋನಿ ಎದುರುಗಡೆ, ಕುಂದವಾಡ ಗ್ರಾಮದ ಭೂ ಪ್ರದೇಶದಲ್ಲಿ ಜರುಗಿದ ಎರಡನೇ ಹಂತದ ವನಮಹೋತ್ಸವದ ಅಂಗವಾಗಿ 2000 ಸಸಿ ನೆಡುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾನವನ ಅಭಿವೃದ್ಧಿಯ ಹಂಬಲದಿಂದ ಪರಿಸರದ ಮೇಲೆ ಸಾಕಷ್ಟು ದುಷ್ಪರಿಣಾಮಗಳು ಬೀರುತ್ತಿವೆ. ಇದನ್ನು ತಡೆಗಟ್ಟಲು ಅರಣ್ಯ ಪ್ರದೇಶ ಹೆಚ್ಚಿಸಲು ಮರ, ಗಿಡ ಬೆಳೆಸಬೇಕಾಗಿದೆ.

ಜಿಲ್ಲೆಯಲ್ಲಿ ಕೇವಲ ಶೇ.12 ಪ್ರತಿಶತ ಅರಣ್ಯ ಭೂ ಪ್ರದೇಶವಿದೆ. ಮಾನದಂಡದಂತೆ ಶೇ.33 ಪ್ರತಿಶತ ಅರಣ್ಯವಿರಬೇಕು. ಇದಕ್ಕಾಗಿ ಪ್ರಸಕ್ತ ವರ್ಷ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿಯಲ್ಲಿ 6.4 ಲಕ್ಷ ಸಸಿಗಳನ್ನು ಬೆಳೆಸಿ, 4 ಕಡೆ ಮಿಯಾವಾಕಿ ಅರಣ್ಯ ನಿರ್ಮಿಸಿ, ಅವುಗಳ ನಿರ್ವಹಣೆಗೂ ಕೂಡ ಅನುದಾನ ನೀಡಲಾಗಿದೆ.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯು ಒಂದು ಕಾಲದಲ್ಲಿ ಮನೆಗಳಿಗಿಂತ ಮರಗಳೇ ಹೆಚ್ಚು ಕಾಣುವಂತಹ ನಗರವಾಗಿತ್ತು. ನಂತರ ಅಭಿವೃದ್ಧಿಯ ಹಿಂದೆ ಬಿದ್ದಂತಹ ಜನರು ಕ್ರಮೇಣ ಇದರಿಂದ ವಿಮೂಕರಾಗಿ, ಮನೆ, ಬಡಾವಣೆ, ಕಾಂಕ್ರೀಟ್ ರಸ್ತೆ ನಿರ್ಮಾಣವೆಂದು ಪರಿಸರ ನಾಶವಾಗುತ್ತಿದೆ. ಎಲ್ಲಾರೂ ಒಟ್ಟಾಗಿ ಕೈ ಜೋಡಿಸಿ, ಮನೆಯ ಸುತ್ತ ಮುತ್ತ ಗಿಡಗಳನ್ನು ನೆಟ್ಟು ಬೆಳೆಸಿದಾಗ ಮಾತ್ರ ಮುಂದಿನ ದಿನಗಳಲ್ಲಿ ದಾವಣಗೆರೆಯನ್ನು ಹಸಿರು ನಗರವನ್ನಾಗಿಸಲು ಸಾಧ್ಯ ಎಂದರು.

ಚಿತ್ರದುರ್ಗದ ಹಿರಿಯ ಪರಿಸರ ಅಧಿಕಾರಿ ರಮೇಶ ಡಿ. ನಾಯಕ್, ಜಿಲ್ಲಾ ಪರಿಸರ ಅಧಿಕಾರಿ ಡಾ. ಹೆಚ್. ಲಕ್ಷಿ ?ಮೀಕಾಂತ, ಮೆ.ಕಾರ್ಗಿಲ್ ಇಂಡಿಯಾ ಪ್ರೈ.ಲಿ ಬೆಳ್ಳೂಡಿ ಯುಟಿಲಿಟಿ ಮ್ಯಾನೇಜರ್ ವೆಂಕಟೇಶ್ ಭಟ್, ಡಿ.ಎಸ್.ಓ ಮಂಜುನಾಥ್ ಉಪಸ್ಥಿತರಿದ್ದರು.

# ಅಡವಿರಾಮಜೋಗಿಹಳ್ಳಿಯಲ್ಲಿ ನಡೆದ ಘಟನೆಯನ್ನು ಸಿಬಿಐ ವಹಿಸದಿದ್ದರೆ ಹೋರಾಟ



ಕವಾಡಿಗರಹಟ್ಟಿ ಹಾಗೂ ಅಡವಿರಾಮಜೋಗಿಹಳ್ಳಿ ಘಟನೆಯನ್ನು ಉನ್ನತ ಮಟ್ಟದ ತನಿಖೆ ನಡೆಸದಿದ್ದರೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಹೋರಾಟ ಕುರಿತು ನಡೆದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಕೆಂಗುಂಟೆ ಜಯಣ್ಣ ಮಾತನಾಡಿದರು.

**ಚಿತ್ರದುರ್ಗ :** ಕವಾಡಿಗರಹಟ್ಟಿ ಹಾಗೂ ಹಿರಿಯೂರು ತಾಲ್ಲೂಕಿನ ಅಡವಿರಾಮಜೋಗಿಹಳ್ಳಿಯಲ್ಲಿ ನಡೆದಿರುವ ಘಟನೆಯನ್ನು ಸಿಬಿಐ. ತನಿಖೆಗೆ ವಹಿಸದಿದ್ದರೆ ಹೋರಾಟ ನಡೆಸುವ ಕುರಿತು ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಪ್ರವಾಸಿ ಮಂದಿರದಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಜಿಲ್ಲಾ ಸಂಚಾಲಕ ಕೆಂಗುಂಟೆ ಜಯಣ್ಣ ಸಭೆಯನ್ನುದ್ದೇಶಿಸಿ ಮಾತನಾಡುತ್ತ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಐವರು ಮೃತಪಟ್ಟು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿರುವುದನ್ನು ಉನ್ನತ ಮಟ್ಟದಲ್ಲಿ ತನಿಖೆ ನಡೆಸಬೇಕು. ಅಡವಿರಾಮಜೋಗಿಹಳ್ಳಿಯಲ್ಲಿ ಅಂಬೇಡ್ಕರ್ ನಾಮಫಲಕ ಅಳವಡಿಸುವ ವಿಚಾರ–ಕ್ಕೆ ಸಂಬಂಧಿಸಿದಂತೆ ದಲಿತರ ಮೇಲೆ ಹಲ್ಲೆ ನಡೆಸಿರುವವರನ್ನು ಬಂಧಿಸಿ ಕಾನೂನು ರೀತಿ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು.

ದೇಶಾದ್ಯಂತ ದಲಿತರ ಮೇಲೆ ಅತ್ಯಾಚಾರ, ಕೊಲೆ, ಸುಲಿಗೆ ನಡೆ–ಯುತ್ತಿದ್ದರೂ ಸಾಮಾಜಿಕ ಜಾಲತಾಣಗಳಲ್ಲಿ ಸಮರ್ಥಿಸಿಕೊಳ್ಳುವ ಕೆಲಸವಾಗುತ್ತಿದೆ. ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಐವರು ಮೃತಪಟ್ಟಿರುವ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಕಾಲರ ಎಂದು ವರದಿ ಬಂದಿರುವುದನ್ನು ಗಮನಿಸಿದರೆ ಪ್ರಕರಣವನ್ನು ಮುಚ್ಚಿ ಹಾಕುವ ಹುನ್ನಾರ ನಡೆಯುತ್ತಿರುವ ಸಂಶಯವಿರುವುದರಿಂದ ಉನ್ನತ ಮಟ್ಟದ ತನಿಖೆಯಾಗಬೇಕು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇವರುಗಳು ಕವಾಡಿಗರಹಟ್ಟಿಗೆ ಭೇಟಿ ನೀಡಿ ನೈಜ ಸ್ಥಿತಿಯನ್ನು ಅರಿಯಬೇಕು. ಅಡವಿರಾಮಜೋಗಿಹಳ್ಳಿ ಘಟನೆಯಲ್ಲಿ ತಪ್ಪಿತಸ್ಥರನ್ನು ಬಂಧಿಸಿ ದಲಿತರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಶ್ರೀನಿವಾಸ್‌ಮೂರ್ತಿ, ಕರಿಬಸಪ್ಪ, ರಘುನಂದನ್, ಚಂದ್ರಮೂರ್ತಿ, ನವೀನ್ ಮದ್ದೇರು, ಪ್ರಭಾಕರ್, ಶ್ರೀನಿವಾಸ್, ಮಲ್ಲಿಕಾರ್ಜುನ್ ಸೇರಿದಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಪೂರ್ವಭಾವಿ ಸಭೆಯಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಅಪೌಷ್ಠಿಕತೆಗೆ ಸೂಕ್ತ ಕ್ರಮ ಕೈಗೊಳ್ಳಿ

**ದಾವಣಗೆರೆ :** ಜಿಲ್ಲೆಯಲ್ಲಿ ಅಪೌಷ್ಠಿಕ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿದ್ದು, ಸಂಬಂಧಿತ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಅಪರ್ಣಾ.ಎಂ.ಕೊಳ್ಳ ತಿಳಿಸಿದರು.

ಸೋಮವಾರ ಜಿಲ್ಲೆಯಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಸರ್ಕಾರಿ ಬಾಲಕಿಯರ ಬಾಲ ಮಂದಿರ, ಸ್ವಯಂ ಸೇವಾ ಮಕ್ಕಳ ಪಾಲನಾ ಸಂಸ್ಥೆ, ಸರ್ಕಾರಿ ದತ್ತು ಸಂಸ್ಥೆ, ಸಮಾಜ ಕಲ್ಯಾಣ ಇಲಾಖೆಯ ಪೋಸ್ಟ್ ಮೆಟ್ರಿಕ್ ವಸತಿ ನಿಲಯಗಳಿಗೆ ಭೇಟಿ ನೀಡಿ, ಜಿಲ್ಲಾ ಆಸ್ಪತ್ರೆ ಮತ್ತು ಜಿಲ್ಲಾಧಿಕಾರಿಗಳೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಅಪೌಷ್ಠಿಕ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿದ್ದು, ಅಧಿಕಾರಿಗಳು ಯಾವುದೇ ನಿರ್ಲಕ್ಷ್ಯವಹಿಸದೇ ಸೂಕ್ತ ಕ್ರಮ ಕೈಗೊಳ್ಳಬೇಕು. ಜಿಲ್ಲಾಸ್ಪತ್ರೆಯಲ್ಲಿ 30 ಅಪೌಷ್ಠಿಕ ಮಕ್ಕಳಿಗೆ ಮಾತ್ರ ಹಾಸಿಗೆ ವ್ಯವಸ್ಥೆ ಇದ್ದು, ಹೆಚ್ಚುವರಿ ಹಾಸಿಗೆ, ಕೊಠಡಿ ಮತ್ತು ಸಿಬ್ಬಂದಿಗಳನ್ನು ತೆಗೆದುಕೊಳ್ಳಲು ಸೂಚಿಸಿದರು.

ನಗರದ ಕುಂದುವಾಡ ರಸ್ತೆಯ ಸರ್ಕಾರಿ ಪೋಸ್ಟ್ ಮೆಟ್ರಿಕ್ ವಸತಿ ನಿಲಯಕ್ಕೆ ಭೇಟಿ ನೀಡಿ ಬೆಳಗ್ಗೆ 10 ಗಂಟೆಯಾದರೂ ಅಡುಗೆ ಸಿಬ್ಬಂದಿ ಮತ್ತು ನಿಲಯ ಪಾಲಕರು ಹಾಜರಿರುವುದಿಲ್ಲ. ಅಡುಗೆ ಪರಿಕರಗಳು ಸ್ವಚ್ಚತೆಯಿಂದ ಕೂಡಿರುವುದಿಲ್ಲ, ಸ್ಯಾನಿಟರಿ ಪ್ಯಾಡ್ 1 ತಿಂಗಳು ಮಾತ್ರ ವಿತರಿಸಿ ನಂತರ ವಿತರಣೆ ಮಾಡಿರುವುದಿಲ್ಲ, 150 ಮಕ್ಕಳಲ್ಲಿ 110 ಮಕ್ಕಳ ಮಾತ್ರ ಹಾಜರಿದ್ದಾರೆ, ಊಟ ಮತ್ತು ತಿಂಡಿಯಲ್ಲಿ ರುಚಿ ಹಾಗೂ ಪೌಷ್ಠಿಕತೆ ಇಲ್ಲದಿರುವುದು ಕಂಡುಬಂದಿದ್ದರಿಂದ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

### ಹರಾಜು ಪ್ರಕ್ರಿಯೆ

**ದಾವಣಗೆರೆ :** ಮುಟ್ಟುಗೋಲು ಹಾಕಿಕೊಂಡಿರುವ 2 ಗ್ಯಾಸ್ ಫಿಲ್ಲಿಂಗ್ ಮಿಷನ್, 1 ಎಲೆಕ್ಟ್ರಾನಿಕ್ ತೂಕದ ಯಂತ್ರ ಮತ್ತು ಗ್ಯಾಸ್ ರೀಫಿಲ್ಲಿಂಗ್ ಮಾಡುವ 2 ಕಡ್ಡಿಗಳನ್ನು ಹರಾಜು ಮಾಡಲಾಗುತ್ತದೆ.

ಆಸಕ್ತರು ಆಗಸ್ಟ್ 23 ರಂದು ಬೆಳಿಗ್ಗೆ 11 ಗಂಟೆಗೆ ತಾಲ್ಲೂಕು ಕಚೇರಿ ಆವರಣದಲ್ಲಿ ನಡೆಯುವ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಸಹಯಕ ನಿರ್ದೇಶಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

**ದಾವಣಗೆರೆ :** ಮಹಾನಗರ ಪಾಲಿಕೆಗೆ ಸ್ವಚ್ಚ ಭಾರತ್ ಮಿಷನ್ 2.0 ಅಡಿಯಲ್ಲಿ ಐ.ಇ.ಸಿ ಚಟುವಟಿಕೆಗಳನ್ನು ಕೈಗೊಳ್ಳಲು ಸ್ವಸಹಾಯ ಗುಂಪು (ಎಸ್.ಹೆಚ್.ಜಿ) ಮತ್ತು ಸರ್ಕಾರೇತರ ಸಂಸ್ಥೆ(ಎನ್.ಜಿ.ಒ) ಯ ಸದಸ್ಯರಿಂದ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ನಲ್ಮ್ ಡೇ ಯೊಂದಿಗೆ ನೊಂದಾಯಿಸಿಕೊಂಡ ಎಸ್.ಹೆಚ್.ಜಿ ಮತ್ತು ಎನ್.ಜಿ.ಒ ಸದಸ್ಯರು ತಮ್ಮ ಆಸಕ್ತಿಯ ಅಭಿವ್ಯಕ್ತಿಯನ್ನು ನಲ್ಮ್ ಡೇ ಯ ಹಿಂಬರಹ ಹಾಗೂ ಗುರುತಿನ ಪುರಾವೆ, ವಿಳಾಸದ ಪುರಾವೆ, ಅರ್ಹತಾ ಪಟ್ಟಿಯಲ್ಲಿ ನೊಂದಾಯಿಸಿಕೊಂಡಿರುವುದಕ್ಕೆ (ಎಂಪಾನೆಲ್) ದಾಖಲೆಗಳು, ಶೈಕ್ಷಣಿಕ ಅರ್ಹತೆ ದಾಖಲೆಗಳೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಆಗಸ್ಟ್ 30 ರ ಸಂಜೆ 5 ಗಂಟೆಯೊಳಗಾಗಿ ಇ-ಮೇಲ್ ವಿಳಾಸ **healthccd@gmail.com** ಗೆ ಕಳುಹಿಸಬೇಕು.

ಅರ್ಜಿ ನಮೂನೆ ಹಾಗೂ ಆಯ್ಕೆ ಪ್ರಕ್ರಿಯೆ ಮತ್ತು ವೇತನಕ್ಕೆ ಸಂಬಂಧಿಸಿದ ವಿವರಗಳನ್ನು ಪಡೆಯಲು **www.davanagerecity.mrc.gov.in** ಅನ್ನು ಸಂಪರ್ಕಿಸಲು ಮಹಾನಗರ ಪಾಲಿಕೆ ಆಯುಕ್ತೆ ಶ್ರೀಮತಿ ರೇಣುಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವನಮಹೋತ್ಸವ ಕಾರ್ಯಕ್ರಮ

**ದಾವಣಗೆರೆ :** ನಗರದ ತುಂಗಭದ್ರ ಬಡಾವಣೆ ಭಾಗ-1, ಕೆ.ಹೆಚ್.ಬಿ ಕಾಲೋನಿ ಎದುರುಗಡೆ, ಕುಂದವಾಡ ಗ್ರಾಮದ ಭೂ ಪ್ರದೇಶದಲ್ಲಿ ಆಗಸ್ಟ್ 17 ರಂದು ಬೆಳಿಗ್ಗೆ 10 ಗಂಟೆಗೆ ವನಮಹೋತ್ಸವದ ಎರಡನೇ ಹಂತವಾಗಿ 2000 ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿ ಮತ್ತು ಮೆ.ಕಾರ್ಗಿಲ್ ಇಂಡಿಯಾ ಪ್ರೈ.ಲಿ. ಬೆಳ್ಳೂಡಿ ಇವರ ಸಹಯೋಗದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್.ಬಿ.ಇಟ್ನಾಳ್ ಮತ್ತು ಅಪರ ಜಿಲ್ಲಾಧಿಕಾರಿ ಹಾಗೂ ಅಪರ ದಂಡಾಧಿಕಾರಿ ಪಿ.ಎನ್ ಲೋಕೇಶ್ ಹಾಗೂ ಮಹಾನಗರ ಪಾಲಿಕೆ ಸದಸ್ಯರು ಭಾಗವಹಿಸಲಿದ್ದಾರೆ.

### ಸಂಸ್ಕರಣಾ ಘಟಕಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ 2023-24 ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಬೆಳೆಗಳಾದ ಕಾಳು ಮೆಣಸು, ಅಂಗಾಂಶ ಬಾಳೆ, ತರಕಾರಿ, ಹೂವುಗಳು, ಹೊಸ ಪ್ರದೇಶ ವಿಸ್ತರಣೆ, ಕೃಷಿಹೊಂಡ, ಪ್ಯಾಕ್ ಹೌಸ್, ಪಾಲಿಹೌಸ್, ಪ್ರಾಥಮಿಕ ಸಂಸ್ಕರಣಾ ಘಟಕಗಳನ್ನು ನಿರ್ಮಿಸಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಮೀನಿನ ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪುಸ್ತಕದ ಜೆರಾಕ್ಸ್ ಪ್ರತಿಯೊಂದಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಲ್ಲಾ ಪಂಚಾಯಿತಿ) ಹೊನ್ನಾಳಿ ಕಛೇರಿಯಲ್ಲಿ ಹಾಗೂ ಹೋಬಳಿವಾರು ರೈತ ಸಂಪರ್ಕ ಕೇಂದ್ರಗಳಲ್ಲಿ ಸಹಾಯಕ ತೋಟಗಾರಿಕೆ ಅಧಿಕಾರಿಗಳಿಗೆ ಆ.23ರ ಒಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

# ದ್ವಿತೀಯ ಪಿಯುಸಿ 3188 ವಿದ್ಯಾರ್ಥಿಗಳಿಗೆ 7 ಪರೀಕ್ಷಾ ಕೇಂದ್ರಗಳು



**ಚಿತ್ರದುರ್ಗ :** ಇದೇ ಆಗಸ್ಟ್ 21 ರಿಂದ ಸೆಪ್ಟೆಂಬರ್ 2 ರವರೆಗೆ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ-2 ನಡೆಯಲಿದೆ. ಜಿಲ್ಲೆಯಲ್ಲಿ 3188 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಜರುಗಲಿದೆ. ಪರೀಕ್ಷಾ ಕಾರ್ಯವನ್ನು ಯಾವುದೇ ಸಮಸ್ಯೆಯಾಗದಂತೆ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ-2ರ ಪರೀಕ್ಷಾ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಕೇಂದ್ರಗಳ ಸುತ್ತ ಅಗತ್ಯ ಬಂದೋಬಸ್ತ್ ಕಲ್ಪಿಸಬೇಕು. ಸೂಕ್ತ ಪೊಲೀಸ್ ರಕ್ಷಣೆಯಲ್ಲಿಯೇ ಪ್ರಶ್ನೆಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ತಲುಪಿಸಬೇಕು. ಪ್ರಶ್ನೆಪತ್ರಿಕೆಗಳ ರಕ್ಷಣೆಗಾಗಿ ನೇಮಿಸಿರುವ ವಿಶೇಷ ಪ್ರಶ್ನೆ ಪತ್ರಿಕಾ ಪಾಲಕರ ತ್ರಿಸದಸ್ಯ ಸಮಿತಿ ನಿಯಮಾನುಸಾರ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ಪರೀಕ್ಷಾ ಕಾರ್ಯ ಕೇವಲ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಮಾತ್ರ ಸಂಬಂಧಿಸಿಲ್ಲ. ಜಿಲ್ಲಾಡಳಿತ, ತಾಲ್ಲೂಕು ಆಡಳಿತ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸೇರಿ ಯಾವುದೇ ಸಮಸ್ಯೆಯಾಗದಂತೆ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಬೇಕು ಎಂದು ತಾಕೀತು ಮಾಡಿದರು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ ಮಾತನಾಡಿ, ಚಿತ್ರದುರ್ಗ ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಹಾಗೂ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು, ಚಳ್ಳಕೆರೆಯ ಸರ್ಕಾರಿ ಪದವಿಪೂರ್ವ ಕಾಲೇಜು, ಹಿರಿಯೂರು ಸರ್ಕಾರಿ ಪದವಿಪೂರ್ವ ಕಾಲೇಜು, ಹೊಸದುರ್ಗದ ಸರ್ಕಾರಿ ಪದವಿಪೂರ್ವ ಕಾಲೇಜು, ಮೊಳಕಾಲ್ಮುರು ಸರ್ಕಾರಿ ಪದವಿಪೂರ್ವ ಕಾಲೇಜು ಹಾಗೂ ಹೊಳಲ್ಕೆರೆಯ ಕೊಟ್ರ ನಂಜಪ್ಪ ಪದವಿಪೂರ್ವ ಕಾಲೇಜು ಸೇರಿದಂತೆ ಜಿಲ್ಲೆಯಲ್ಲಿ 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. 3188 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಜಿಲ್ಲೆಯಲ್ಲಿ ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಪರೀಕ್ಷಾ ಕೇಂದ್ರಗಳು ಇಲ್ಲ. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಅವಶ್ಯಕತೆ ಇದೆ. ಪರೀಕ್ಷೆ ಪ್ರಾರಂಭವಾಗುವುದಕ್ಕಿಂತ ಒಂದು ಗಂಟೆ ಮುಂಚಿತವಾಗಿ ಹಾಗೂ ಪರೀಕ್ಷಾ ನಂತರ 30 ನಿಮಿಷಗಳು ಪೊಲೀಸ್ ಬಂದೋಬಸ್ತಿನ ಅವಶ್ಯಕತೆ ಇದೆ. ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರನ್ನು ನೇಮಕ ಮಾಡಬೇಕು. ಪರೀಕ್ಷಾ ಕೇಂದ್ರದ ಸುತ್ತಮುತ್ತಲಿರುವ ಜೆರಾಕ್ಸ್ ಮತ್ತು ಕಂಪ್ಯೂಟರ್ ಅಂಗಡಿಗಳನ್ನು ಮುಚ್ಚಿಸುವುದು. ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶ 144 ಸೆಕ್ಷನ್ ಜಾರಿ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳ ಮಾಹಿತಿಯನ್ನು ಆನ್‌ಲೈನ್ ಮೂಲಕ ದಾಖಲಿಸಬೇಕು. ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಮೊಬೈಲ್ ಪೋನುಗಳನ್ನು ತರುವುದು ಕಡ್ಡಾಯವಾಗಿ ನಿಷೇಧಿಸುವುದು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ ಸೇರಿದಂತೆ ಆಯಾ ತಾಲ್ಲೂಕಿನ ತಹಶೀಲ್ದಾರ್‌ಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ದಲಿತರ ಮೇಲೆ ಹಲ್ಲೆ ಖಂಡಿಸಿ ಒತ್ತಡ ಹೇರಿದ ಕೃಷ್ಣ




**ಚಿತ್ರದುರ್ಗ :** ಹಿರಿಯೂರು ತಾಲ್ಲೂಕಿನ ಅಡವಿ ರಾಮಜೋಗಿಹಳ್ಳಿಯಲ್ಲಿ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ ನಾಮಫಲಕ ಅಳವಡಿಸುವ ವಿಚಾರದಲ್ಲಿ ದಲಿತರ ಮೇಲೆ ಅನ್ಯ ಕೋವಿನವರು ಹಲ್ಲೆ ನಡೆಸಿರುವುದನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿ ನ್ಯಾಯ ಒದಗಿಸಬೇಕೆಂದು ಡಾ.ಅಂಬೇಡ್ಕರ್ ಪೀಪಲ್ಸ್ ಪಾರ್ಟಿ ರಾಜ್ಯಾಧ್ಯಕ್ಷ ಕೃಷ್ಣ ಸಿ.ಎಂ. ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಈ ಘಟನೆಯಲ್ಲಿ ನಾಮಫಲಕ ಅಳವಡಿಕೆ ವಿಚಾರವೊಂದೆ ಅಲ್ಲ. ಹೊಲಕ್ಕೆ ಹೋಗಲು ದಾರಿ ಸಮಸ್ಯೆಯೂ ಇದೆ. ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಕೂಡ ಸಂವಿಧಾನ ವಿರೋಧಿ ನೀತಿ ಅನುಸರಿಸುತ್ತಿದೆ. ದೇಶಕ್ಕೆ ಸ್ವಾತಂತ್ರ್ಯ ಬಂದು 77 ವರ್ಷಗಳಾಗಿದ್ದರೂ ಇನ್ನು ಅಡವಿ ರಾಮಜೋಗಿಹಳ್ಳಿಯಲ್ಲಿ ದಲಿತರಿಗೆ ಮೂಲಭೂತ ಸೌಲಭ್ಯಗಳು ಸಿಗುತ್ತಿಲ್ಲ. ಸರ್ಕಾರ ಮತ್ತು ಜಿಲ್ಲಾಧಿಕಾರಿ ವಿರುದ್ದ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸುತ್ತೇವೆ. ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಕಂದಾಯ, ಜಿಲ್ಲಾಡಳಿತ ಸೇರಿ ಘಟನೆ ನಡೆದಿರುವ ಗ್ರಾಮದಲ್ಲಿ ಪಂಚನಾಮೆ ನಡೆಸಿ ಅಂಬೇಡ್ಕರ್ ಭವನ, ಪ್ರತಿಮೆ ನಿರ್ಮಾಣ ಮಾಡಬೇಕು. ರಾಜ್ಯದ ಎಲ್ಲಾ ಗ್ರಾಮಗಳಲ್ಲಿಯೂ ಇಂತಹ ಸಮಸ್ಯೆಯಿದೆ ಎಂದು ಹೇಳಿದರು.

ಹೈಕೋರ್ಟ್ ವಕೀಲ ದೇವಮಿತ್ರ, ಪಕ್ಷದ ಸಂಸ್ಥಾಪಕ ರಾಜ್ಯಾಧ್ಯಕ್ಷ ಮಾರುತಿರಾವ್ ಜಂಬಗ, ಬ್ಯಾಲಾಳ್ ಜಯಣ್ಣ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಕೆಂಗುಂಟೆಯ ಪ್ರೌಢಶಾಲೆ ಸ್ವಾತಂತ್ರ್ಯ ದಿನಾಚರಣೆ ಆಚರಣೆ



**ಚಿತ್ರದುರ್ಗ :** ಹೊಳಲ್ಕೆರೆ ತಾಲ್ಲೂಕಿನ ಮಲ್ಲಾಡಿಹಳ್ಳಿ ಸಮೀಪ ಕೆಂಗುಂಟೆಯಲ್ಲಿರುವ ರಂಗನಾಥ ಪ್ರೌಢಶಾಲೆಯಲ್ಲಿ ಮಂಗಳವಾರ ಭಾರತದ 77 ನೇ ಸ್ವಾತಂತ್ರ್ಯ ದಿನಾಚರಣೆಯಂದು ಧ್ವಜಾರೋಹಣ ನೆರವೇರಿಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ಉಪಾಧ್ಯಕ್ಷ ಎಲ್.ಬಿ.ರಾಜಪ್ಪ ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತ ಭಾರತ 77 ನೇ ಸ್ವಾತಂತ್ರ್ಯ ದಿನಾಚರಣೆ ಆಚರಿಸಿಕೊಳ್ಳುತ್ತಿರುವುದರ ಹಿಂದೆ ಅನೇಕ ಹಿರಿಯ ಮಹನೀಯರ ತ್ಯಾಗ ಬಲಿದಾನವಿದೆ. ಇಂದಿನ ಯುವ ಪೀಳಿಗೆ ದೇಶಕ್ಕಾಗಿ ಹೋರಾಡಿ ಪ್ರಾಣಾರ್ಪಣೆ ಮಾಡಿರುವ ಹಿರಿಯರ ಇತಿಹಾಸ ತಿಳಿದುಕೊಂಡು ದೇಶಭಕ್ತಿ ಮೈಗೂಡಿಸಿಕೊಳ್ಳುವಂತೆ ಹೇಳಿದರು.

ನಿವೃತ್ತ ಶಿಕ್ಷಕ ಎಲ್.ಎಸ್. ಚಂದ್ರಶೇಖರ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಜಿ.ಬಿ.ಓಂಕಾರಪ್ಪ, ಪ್ರೌಢಶಾಲೆಯ ಮುಖ್ಯ ಶಿಕ್ಷಕ ಹಾಗೂ ಶಿಕ್ಷಕ ವೃಂದದವರು ಈ ಸಂದರ್ಭದಲ್ಲಿ ಹಾಜರಿದ್ದರು.

# ಮುಚ್ಚಿದ ನ್ಯಾಯಾಲಯದಲ್ಲಿ ಲೈಂಗಿಕ ದೌರ್ಜನ್ಯ ಪ್ರಕರಣಗಳ ವಿಚಾರಣೆ



**ದಾವಣಗೆರೆ :** ಲೈಂಗಿಕ ದೌರ್ಜನದಂತಹ ಪ್ರಕರಣಗಳನ್ನು ಮುಚ್ಚಿದ ನ್ಯಾಯಾಲಯದಲ್ಲಿ ವಿಚಾರಣೆ ನಡೆಸುವ ಕಾರಣ ಯಾವುದೇ ಮಕ್ಕಳಾಗಲಿ, ಪೋಷಕರಾಗಲಿ, ಇನ್ನಿತರ ಅಧಿಕಾರಿಗಳಾಗಲಿ ಯಾವುದೇ ಹಿಂಜರಿಕೆ, ಭಯ, ಇಲ್ಲದೆ ಲೈಂಗಿಕ ದೌರ್ಜನ್ಯಗಳ ವಿರುದ್ಧ ದೂರು ನೀಡಬೇಕು ಎಂದು ಮಕ್ಕಳ ಸ್ನೇಹಿ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ಶ್ರೀಪಾದ ತಿಳಿಸಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ, ಜಿಲ್ಲಾ ವಕೀಲರ ಸಂಘ, ದಾವಣಗೆರೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ದಾವಣಗೆರೆ ದಕ್ಷಿಣ ವಲಯ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಗುರುಭವನದಲ್ಲಿ ಆಯೋಜಿಸಲಾಗಿದ್ದ ಪೋಕ್ಸ್ ಕಾನೂನಿನ ಅರಿವು ಬಾಲ್ಯವಿವಾಹ ತಡೆ, ಬಾಲಕಾರ್ಮಿಕ, ಮಾದಕ ವಸ್ತುಗಳ ಸೇವನೆಯಿಂದ ಆಗುವ ಹಾನಿ ಹಾಗೂ ಮಕ್ಕಳ ಸುರಕ್ಷತೆ ಬಗ್ಗೆ ತಾಲ್ಲೂಕು ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಲೈಂಗಿಕ ದೌರ್ಜನದ ಅಪರಾಧಗಳೆಂದರೆ ಕೇವಲ ಬಾಲಕಿಯರ ಮೇಲಷ್ಟೇ ಅಲ್ಲ. 18 ವರ್ಷದೊಳಗಿನ ಬಾಲಕ ಬಾಲಕಿಯರ ಎನ್ನದೆ ಲಿಂಗ ಭೇದವಿಲ್ಲದೆ ಯಾವುದೇ ಮಕ್ಕಳ ಮೇಲೆ ನಡೆಯುವ ಎಲ್ಲಾ ಪ್ರಕರಣಗಳನ್ನು ಲೈಂಗಿಕ ಅತ್ಯಾಚಾರ ಪ್ರಕರಣಗಳೆಂದು ಹೇಳಬಹುದು. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಶಾಲೆಯ ಮತ್ತು ಕಾಲೇಜುಗಳ ಶಿಕ್ಷಕರು ಮತ್ತು ಪ್ರಾಧ್ಯಾಪಕರು ಈ ನಿಟ್ಟಿನಲ್ಲಿ ಮಕ್ಕಳ ಮೇಲೆ ಸದಾ ಕಾಳಜಿ ವಹಿಸುವ ಮೂಲಕ ಅವರ ಚಲನ ವಲನಗಳನ್ನು ಗಮನಿಸಬೇಕು ಎಂದು ಕಿವಿಮಾತು ಹೇಳಿದರು.

ಲೈಂಗಿಕ ಅತ್ಯಾಚಾರಗಳು ಕೇವಲ ಅಪರಿಚಿತರಂದಲೇ ಆಗುತ್ತವೆ ಎನ್ನುವುದು ಸಹಜ. ಅದೆಷ್ಟೋ ಪ್ರಕರಣಗಳು ಪೋಷಕರಿಂದ, ಶಿಕ್ಷಕರಿಂದ, ನೆರೆಹೊರೆಯವರಿಂದ ಮತ್ತು ಸಂಬಂದಿಕರಿಂದಲೇ ಇತ್ತೀಚಿನ ದಿನಗಳಲ್ಲಿ ಲೈಂಗಿಕ ಪ್ರಕರಣಗಳು ಹೆಚ್ಚಾಗುತ್ತವೆ. ಈ ನಿಟ್ಟಿನಲ್ಲಿ ಯಾವುದೇ ಮುಚ್ಚುಮರೆ ಇಲ್ಲದೆ ಸಂತ್ರಸ್ತರು ತಮ್ಮ ದೂರುಗಳನ್ನು ಸಂಬಂಧ ಪಟ್ಟ ಪೊಲೀಸ್ ಠಾಣೆಗೆ ಅಥವಾ ನ್ಯಾಯಕ್ಕೆ ನೀಡಿದಾಗ ತಪ್ಪಿತಸ್ಥರಿಗೆ ತಕ್ಷ ತಕ್ಕ ಶಿಕ್ಷೆ ನೀಡುವಲ್ಲಿ ನ್ಯಾಯಾಲಯ ಮುಂದಾಗಲಿದೆ ಅಲ್ಲದೆ ಸಂತ್ರಸ್ತರಿಗೆ ಪರಿಹಾರ ನೀಡಲಿದೆ ಎಂದು ಹೇಳಿದರು.


ಯಾವುದೇ ಸ್ಥಳದಲ್ಲಾಗಲಿ ಲೈಂಗಿಕ ದೌರ್ಜನ್ಯಗಳು ನಡೆದಾಗ ಅದನ್ನು ನೋಡಿದ ಅಥವಾ ಅದರ ಬಗ್ಗೆ ತಿಳಿದಿದ್ದರೂ ಸಹ ಅದರ ಬಗ್ಗೆ ಹೇಳದವರೂ ಸಹ ಆರೋಪಿಗಳ ಸ್ಥಾನದಲ್ಲಿ ನಿಲ್ಲುತ್ತಾರೆ. ಸಾರ್ವಜನಿಕರಾಗಲಿ ಅಥವಾ ಇನ್ನಿತರೆ ಯಾವುದೇ ಕ್ಷೇತ್ರದ ವ್ಯಕ್ತಿಗಳಾಗಲಿ ಇಂತಹ ತಪ್ಪುಗಳು ಕಂಡು ಬಂದಾಗ ತಕ್ಷಣವೇ ಸಂಬಂಧಪಟ್ಟ ಪ್ರಾಧಿಕಾರಕ್ಕೆ ತಿಳಿಸುವ ಮೂಲಕ ಮಾಡಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್. ಅರುಣ್ ಕುಮಾರ್ ಮಾತನಾಡಿ, ದೇಶಕ್ಕೆ ಸ್ವತಂತ್ರ ಬಂದು 77 ವರ್ಷಗಳು ಕಳೆದಿವೆ. ನಾವುಗಳು ಸಂವಿಧಾನವನ್ನು ಒಪ್ಪಿಕೊಂಡು ಅದರ ಅಡಿಯಲ್ಲಿ ಬಾಳುತ್ತಿದ್ದೇವೆ. ಅನೇಕ ಕಾನೂನುಗಳು ಇವೆ. ಎಲ್ಲಾ ಕಾನೂನುಗಳ ತಾಯಿ ನಮ್ಮ ಸಂವಿಧಾನ. ಸಮಾನತೆ, ಸಹಬಾಳ್ವೆ, ಸಮಾಜದ ಅಭಿವೃದ್ಧಿಗೆ ಹಲವು ಕಾನೂನುಗಳನ್ನು ನಮ್ಮ ಸಂವಿಧಾನ ರಚಿಸಿದೆ. ಆದರೆ ಇಂದಿಗೂ ಮಹಿಳೆಯರು ಮತ್ತು ಮಕ್ಕಳ ಮೇಲೆ ಶೋಷಣೆ ನಡೆಯುತ್ತಿವೆ. ಹಲವಾರು ಸಮಸ್ಯೆಗಳು ಈಗಲೂ ನಮ್ಮ ಮುಂದೆ ಇವೆ. ಸಮಾನತೆಯ ಯುಗ ಬಂದಿದ್ದರೂ ಸಹ ಹಿಂದಿನಷ್ಟು ಶೋಷಣೆ ಈಗ ಕಾಣುತ್ತಿಲ್ಲ ಎಂದು ಹೇಳಿದರು.

ಸಾರ್ವಜನಿಕರಲ್ಲಿ ಕಾನೂನಿನ ಅರಿವಿನ ಬಗ್ಗೆ ಜಾಗೃತಿ ಮೂಡಿಸಲು ಶಿಕ್ಷಣ ಇಲಾಖೆ ಮುಂದಾಗಬೇಕಾಗಿದೆ. ಎಲ್ಲಾ ಹಂತದ ವ್ಯಕ್ತಿಗಳ ನಿರ್ಮಾಣದಲ್ಲಿ ಶಿಕ್ಷಣ ಇಲಾಖೆ ಪ್ರಮುಖ ಪಾತ್ರ ವಹಿಸುತ್ತದೆ. ಕಾರಣ ಸಮಾಜವನ್ನು ತಿದ್ದುವ ಮೂಲಕ ಸಮಾಜಕ್ಕೆ ಉತ್ತಮ ಸಂದೇಶವನ್ನು ಶಿಕ್ಷಣ ಇಲಾಖೆ ನೀಡಬೇಕಾಗಿದೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ವಕೀಲರ ಸಂಘದ ಕಾರ್ಯದರ್ಶಿ ಎಸ್.ಬಸವರಾಜ್, ಸಹ ಕಾರ್ಯದರ್ಶಿ ಎ.ಎಸ್.ಮಂಜುನಾಥ್ ಆಗಮಿಸಿದ್ದರು. ಡಿಡಿಪಿಐ ಜಿ.ಕೊಟ್ರೇಶ್ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ.ಕರೆಣ್ಣವರ, ಬಿಇಓ ಡಾ.ಪುಷ್ಪಾಲತ, ಕ್ಷೇತ್ರ ಸಮನ್ವಯ ಅಧಿಕಾರಿ ಬಿ.ಎಂ.ಚೌಡಪ್ಪ ಇತರರು ಇದ್ದರು.

## ಫಾಸ್ಟ್ ನ್ಯೂಸ್



**ಚಿತ್ರದುರ್ಗ :** ಭರಮಸಾಗರ ಹೋಬಳಿ ಇಸಾಮುದ್ರ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಸವಿತಾ ರೇವಣಸಿದ್ದಪ್ಪ, ಉಪಾಧ್ಯಕ್ಷರಾಗಿ ಶಿವಮ್ಮ ರಾಮಚಂದ್ರನಾಯ್ಕ ಇವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನವಾಗಿ ಆಯ್ಕೆಯಾದ ಅಧ್ಯಕ್ಷ–ಉಪಾಧ್ಯಕ್ಷರುಗಳಿಗೆ ಸದಸ್ಯರುಗಳು ಶುಭ ಹಾರೈಸಿದರು.

## "ನಿಧಿ ಆಪ್ಕೆ ನಿಕಟ್" ಕಾರ್ಯಕ್ರಮ

**ಚಿತ್ರದುರ್ಗ :** ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಆಗಸ್ಟ್ 28 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯ ವರೆಗೆ ಹಿರಿಯೂರು ತಾಲೂಕು ಪರಮನಹಳ್ಳಿಯ ಕಿರ್ಲೋಸ್ಕರ್ ಇಂಡಸ್ಟ್ರೀಸ್ ಲಿಮಿಟೆಡ್ ನಲ್ಲಿ "ನಿಧಿ ಆಪ್ಕೆ ನಿಕಟ್: ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಮಿಕ ಪಿಂಚಣಿದಾರರು ಮತ್ತು ಉದ್ಯೋಗದಾತರ ಕುಂದು ಕೊರತೆ ಪರಿಹಾರ ಮತ್ತು ಮಾಹಿತಿ ವಿನಿಮಯಕ್ಕೆ ವಿಶಾಲ ವೇದಿಕೆಯಾಗಿ, ಅರಿವು ಮೂಡಿಸುವ ಕಾರ್ಯಕ್ರಮ ಇದಾಗಿದೆ.

ಉದ್ಯೋಗದಾತರ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರುವ ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು, ಸುಧಾರಣೆಗಳ ಮಾಹಿತಿಯನ್ನು ಕಾರ್ಯಕ್ರಮದಲ್ಲಿ ತಿಳಿಸಿಕೊಡಲಾಗುವುದು.

ಜಿಲ್ಲೆಯ ಎಲ್ಲಾ ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಕಾರ್ಯಕ್ರಮಕ್ಕೆ ಹಾಜರಾಗಿ ಪ್ರಯೋಜನ ಪಡೆಯುವಂತೆ ಎಂದು ಬಳ್ಳಾರಿ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ. ವೆಂಕಟ ಸುಬ್ಬಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಟ್ಸಪ್ ಹಾಗೂ ಟೆಲಿಗ್ರಾಂ ಮೂಲಕ ವಂಚನೆ : ಎಚ್ಚರಿಕೆ




**ಚಿತ್ರದುರ್ಗ :** ಪದವಿ ಹಾಗೂ ತಾಂತ್ರಿಕ ಶಿಕ್ಷಣ ಪಡೆದು ನಿರುದ್ಯೋಗಿಗಳಾಗಿರುವ ಯುವಕ ಯುವತಿಯರಿಗೆ ವರ್ಕ್ ಫ್ರಮ್ ಹೋಂ ಆಸೆ ತೋರಿಸಿ ವಾಟ್ಸ್‌ಪ್ ಹಾಗೂ ಟೆಲಿಗ್ರಾಂ ಗ್ರೂಪ್‌ಗಳ ಮೂಲಕ ವಂಚನೆ ಮಾಡಿರುವ ಪ್ರಕರಣಗಳು ವರದಿಯಾಗುತ್ತಿವೆ.

ಆರಂಭದಲ್ಲಿ ಮನೆಯಿಂದಲೇ ಕೆಲಸ ಮಾಡಿ, ಸುಲಭವಾಗಿ ತಿಂಗಳಿಗೆ ಲಕ್ಷ ಲಕ್ಷ ಹಣವನ್ನು ಸಂಪಾದಿಸಬಹುದು ಎಂದು ನಿರುದ್ಯೋಗಿಗಳನ್ನು ನಂಬಿಸಿ, ಅವರಿಗೆ ಟಾಸ್ಕ್ ನೀಡಿ, ಸ್ವಲ್ಪ ಹಣವನ್ನು ಫೋನ್ ಪೇ ಮತ್ತು ಇತರೆ ವ್ಯಾಲೆಟ್‌ಗಳ ಮೂಲಕ ಪಾವತಿಸಿ, ಅವರ ನಂಬಿಕೆ ಗಳಿಸಿಕೊಂಡ ನಂತರ, ನೊಂದಣಿ ಶುಲ್ಕ ಕಮಿಷನ್ ಹಾಗೂ ಇತರೆ ಶುಲ್ಕದ ಹೆಸರಿನಲ್ಲಿ ಅವರಿಂದ ಹೆಚ್ಚಿನ ಹಣ ಪಡದು ವಂಚಿಸಲಾಗುತ್ತಿದೆ.

ಉದ್ಯೋಗದಾತ ಸಂಸ್ಥೆಗಳು ಉದ್ಯೋಗಿಗಳಿಂದ ಯಾವುದೇ ಹಣ ಪಡೆಯುವುದಿಲ್ಲ. ಇಂತಹ ಆಸೆ ಆಮಿಷಗಳಿಗೆ ಒಳಗಾಗದೇ ನಿರುದ್ಯೋಗ ಯುವಕ ಯುವತಿಯರು ಎಚ್ಚರಿಕೆ ವಹಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಪರುಶುರಾಮ್ ತಿಳಿಸಿದ್ದಾರೆ.

# ಪರಶುರಾಂಪುರ ತಾಲ್ಲೂಕು ಕೇಂದ್ರವನ್ನಾಗಿಸಲು ರೈತಸಂಘದಿಂದ ಮನವಿ



**ಚಳ್ಳಕೆರೆ ;** ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪರಶುರಾಮಪುರ ಹೋಬಳಿಯನ್ನು ತಾಲ್ಲೂಕು ಕೇಂದ್ರವಾಗಿ ಪರಿವರ್ತನೆ ಮಾಡಬೇಕೆಂದು ಒತ್ತಾಯಿಸಿ ರೈತ ಸಂಘ, ವಿವಿಧ ಸಂಘ ಸಂಸ್ಥೆಗಳು ಹೋರಾಟ ನಡೆಸುತ್ತಾ ಬಂದಿವೆ. ಆಂಧ್ರ ಪ್ರದೇಶಕ್ಕೆ ಹೊಂದಿಕೊಂಡಿರುವ ಈ ಹೋಬಳಿ ಹಲವಾರು ವೈಶಿಷ್ಟ್ಯತೆ ಹೊಂದಿದೆ. ಜನಸಂಖ್ಯೆಯೂ ಸೇರಿದಂತೆ ತಾಲ್ಲೂಕು ಕೇಂದ್ರವಾಗಿ ಪರಿವರ್ತನೆ ಮಾಡುವ ಎಲ್ಲಾ ಅರ್ಹತೆ ಇದ್ದು, ಕೂಡಲೇ ಪರಶುರಾಮಪುರ ಹೋಬಳಿಯನ್ನು ತಾಲ್ಲೂಕು ಕೇಂದ್ರ ಮಾಡಬೇಕೆಂದು ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಸೋಮಗುದ್ದುರಂಗಸ್ವಾಮಿ ತಿಳಿಸಿದರು.

ಅವರು, ಗುರುವಾರ ನೆಹರೂ ವೃತ್ತದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಹಲವಾರು ಸಂಘ ಸಂಸ್ಥೆಗಳು ಪ್ರತಿಭಟನೆ ನಡೆಸಿ ಕ್ಷೇತ್ರ ಶಾಸಕ ಟಿ.ರಘುಮೂರ್ತಿ ಮೂಲಕ ತಹಶೀಲ್ದಾರ್ ರೇಹಾನ್ ಪಾಷರವರಿಗೆ ಮನವಿ ನೀಡಿ ಮಾತನಾಡಿದರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ, ಪರಶುರಾಮಪುರ ಹೋಬಳಿಯನ್ನು ತಾಲ್ಲೂಕು ಕೇಂದ್ರವನ್ನಾಗಿ ಮಾಡಬೇಕೆಂಬ ರೈತ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳ ಹೋರಾಟಕ್ಕೆ ನನ್ನ ಬೆಂಬಲವಿದೆ. ಇತ್ತೀಚಿಗಷ್ಟೇ ನಾನು ವಿಧಾನಸೌಧ ಅಧಿವೇಶನದಲ್ಲಿ ಚರ್ಚೆ ನಡೆಸಿದ್ದೇನೆ.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ತಾವು ರಾಜ್ಯದ ಮುಖ್ಯಮಂತ್ರಿಗೆ ನೀಡಿದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಮುಂದಿನ ಆದೇಶಕ್ಕಾಗಿ ಇಂದೇ ರಾಜ್ಯಪಾಲರಿಗೆ ಕಳುಹಿಸಿಕೊಡುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ವೆಂಕಟರಮಣಪ್ಪ, ತಾಲ್ಲೂಕು ಅಧ್ಯಕ್ಷ ಕೆ.ಚಿಕ್ಕಣ್ಣ, ಉಪಾಧ್ಯಕ್ಷ ಹಂಪಣ್ಣ, ಎಸ್. ಎಲ್.ಶಂಕರಪ್ಪ, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಎಚ್.ಪ್ರಕಾಶ್, ಖಾದರ್‌ಸಾಬ್ ಮುಂತಾದವರು ಉಪಸ್ಥಿತರಿದ್ದರು.

## ಚಳ್ಳಕೆರೆ ತಾಲ್ಲೂಕಿನ ಕ್ರೀಡಾ ಬೆಳವಣಿಗೆಯಲ್ಲಿ ತಿಪ್ಪೇಸ್ವಾಮಿಯವರ ಪಾತ್ರ ಹಿರಿದು



**ಚಳ್ಳಕೆರೆ :** ತಾಲ್ಲೂಕಿನ ಕ್ರೀಡಾಚಟುವಟಿಕೆಗಳಲ್ಲಿ ಭಾಗವಹಿಸಿ ಮಾರ್ಗದರ್ಶನ ನೀಡಿ, ಸಾವಿರಾರು ಕ್ರೀಡಾಪಟುಗಳ ಬೆಳವಣಿಗೆಗೆ ಸ್ಪಂದಿಸಿರುವ ದೈಹಿಕ ನಿರ್ದೇಶಕ ಎಚ್.ತಿಪ್ಪೇಸ್ವಾಮಿ(ಎಚ್‌ಟಿಎಸ್) ಯವರ ಸೇವೆ ಮತ್ತೊಮ್ಮೆ ತಾಲ್ಲೂಕಿಗೆ ಸಿಕ್ಕಿರುವುದು ಸಂತಸ ವಿಷಯ. ಮುಂದಿನ ದಿನಗಳಲ್ಲಿ ಕ್ರೀಡಾ ಬೆಳವಣಿಗೆಗೆ ಇನ್ನೂ ಹೆಚ್ಚು ಅವಕಾಶ ದೊರೆಯಲಿದೆ ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜೆ.ಟಿ.ವೀರಭದ್ರಸ್ವಾಮಿ ತಿಳಿಸಿದರು.

ಅವರು, ಗುರುವಾರ ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಹಿರಿಯೂರು ವಾಣಿ ಸಕ್ಕರೆ ಪ್ರಥಮ ದರ್ಜೆ ಕಾಲೇಜಿನಿಂದ ವರ್ಗಾವಣೆಗೊಂಡು ಕರ್ತವ್ಯಕ್ಕೆ ಹಾಜರಾದ ಎಚ್.ತಿಪ್ಪೇಸ್ವಾಮಿಯವರನ್ನು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಪರವಾಗಿ ಸನ್ಮಾನಿಸಿ ಮಾತನಾಡಿದರು. ಕ್ರೀಡಾ ಕ್ಷೇತ್ರದಲ್ಲಿ ತಿಪ್ಪೇಸ್ವಾಮಿಯವರ ಕ್ರಿಯಾಶೀಲತೆಯನ್ನು ಈ ಭಾಗದ ಎಲ್ಲಾ ಕ್ರೀಡಾಪಟುಗಳು ಹೆಚ್ಚು ತಿಳಿದಿದ್ದು ಅವರ ಮಾರ್ಗದರ್ಶನದಲ್ಲಿ ಚಳ್ಳಕೆರೆ ತಾಲ್ಲೂಕಿನ ಕ್ರೀಡಾ ಕ್ಷೇತ್ರ ಇನ್ನೂ ಉತ್ತಗಂಗಕ್ಕೇರಲಿದೆ ಎಂದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಎಚ್. ತಿಪ್ಪೇಸ್ವಾಮಿ, ನಾನು ಪ್ರಾರಂಭದಲ್ಲಿ ಚಳ್ಳಕೆರೆಯಿಂದ ಕರ್ತವ್ಯ ಪ್ರಾರಂಭಿಸಿ, ಪದನ್ನೋತ್ತಿ ಪಡೆದು ಹಿರಿಯೂರು ಕಾಲೇಜಿಗೆ ವರ್ಗಾವಾಗಿದ್ದೆ ಮತ್ತೆ ನನಗೆ ಇಲ್ಲಿಯೇ ವರ್ಗಾವಾಗಿರುವುದು ಸಂತೋಷವೆನ್ನಿಸುತ್ತಿದೆ. ನನ್ನೊಂದಿಗೆ ಆಡಿ ಬೆಳೆದ ನೂರಾರು ಕ್ರೀಡಾಪಟುಗಳು, ಸ್ನೇಹಿತರು ವಿವಿಧ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರೆಲ್ಲ ಸಹಕಾರದಿಂದ ಇನ್ನೂ ಹೆಚ್ಚಿನ ಸಾಧನೆ ಮಾಡಬೇಕೆಂಬ ಛಲ ನನಗಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಡಾ.ಆರ್. ರಂಗಪ್ಪ, ಡಾ.ಕೆ.ಚಿತ್ತಯ್ಯ, ಶಿಕ್ಷಕ ಡಿ.ಈರಣ್ಣ, ರಾಜಣ್ಣ, ಓಬಣ್ಣ, ಸಿದ್ದೇಶ್, ಎಚ್.ಸಿ.ಶಿವಮೂರ್ತಿ, ವಿನೇಶ್, ಮಂಜುನಾಥ, ಟಿ.ತಿಪ್ಪೇಸ್ವಾಮಿ, ಕಾಟಯ್ಯ ಮುಂತಾದವರು ಉಪಸ್ಥಿತರಿದ್ದರು.

## ಗಂಗಮ್ಮ ನಿಧನಕ್ಕೆ ಆಂಜನೇಯ ಸಂತಾಪ



**ಚಿತ್ರದುರ್ಗ :** ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಅವರ ಮಾತೃಶ್ರೀ ಗಂಗಮ್ಮ ರುದ್ರಪ್ಪ ಅವರ ನಿಧನಕ್ಕೆ ಮಾಜಿ ಸಚಿವ ಎಚ್.ಆಂಜನೇಯ ಅತೀವ ದುಃಖ ವ್ಯಕ್ತಪಡಿಸಿದ್ದಾರೆ.

ಹೊಳಲ್ಕೆರೆ ತಾಲೂಕು ಹಿರೇಕಂದವಾಡಿ ಗ್ರಾಮದ ಸಾಮಾನ್ಯ ಮಹಿಳೆ ಗಂಗಮ್ಮ ಸಂಕಷ್ಟಗಳ ಮಧ್ಯೆ ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ಆದರ್ಶ ಮಹಿಳೆಯಾಗಿದ್ದಾರೆ. ಸಾಮಾನ್ಯ ಕುಟುಂಬದ ಮಹಿಳೆಯೊಬ್ಬರು ಸಮಾಜದಲ್ಲಿ ಹೇಗೆ ಆದರ್ಶ ಬದುಕು ನಡೆಸಬಹುದು ಎಂಬುದಕ್ಕೆ ಗಂಗಮ್ಮ ಅವರ ಜೀವನ ಮಾದರಿ ಆಗಿದೆ ಎಂದು ಸ್ಮರಿಸಿರುವ ಆಂಜನೇಯ ಅವರು, ಗಂಗಮ್ಮ ಅವರ ಅಗಲಿಕೆಯಿಂದ ಕುಟುಂಬದವರಿಗೆ ಆಗಿರುವ ನೋವನ್ನು ಭರಿಸುವ ಶಕ್ತಿ ಬಸವಾದಿ ಶರಣರು ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

## 6ನೇ ತರಗತಿ ಅರ್ಜಿ ಅವಧಿ ವಿಸ್ತರಣೆ

**ಚಿತ್ರದುರ್ಗ :** 2024–25ನೇ ಸಾಲಿಗೆ ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ ನವೋದಯ ವಿದ್ಯಾಲಯದ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಡಳಿತಾತ್ಮಕ ಕಾರಣದಿಂದ ಅರ್ಜಿ ಸಲ್ಲಿಸುವ ದಿನಾಂಕವನ್ನು ಆಗಸ್ಟ್ 25ರ ವರೆಗೆ ವಿಸ್ತರಿಸಲಾಗಿದೆ. ಆಸಕ್ತರು ವಿದ್ಯಾರ್ಥಿಗಳು ಹಾಗೂ ಪೋಷಕರು **https://cbseitms.rcil.gov.in/nvs/index/registration** ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಪ್ರಾಂಶುಪಾಲ ಡೆನಿಯಲ್ ರೆತನ್ ಕುಮಾರ ತಿಳಿಸಿದ್ದಾರೆ.

## ಚಂದ್ರಶಾಲಾ ಕಟ್ಟಡ ಪ್ರಾರಂಭೋತ್ಸವ

**ಚಿತ್ರದುರ್ಗ :** ಗೋನೂರು ಸಮೀಪ ಮುತ್ತಯ್ಯನಹಟ್ಟಿಯಲ್ಲಿರುವ ರಾಜರಾಜೇಶ್ವರಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ಪೂಜಾ ಹಾಗೂ ದೇವಸ್ಥಾನದ ಚಂದ್ರಶಾಲಾ ಕಟ್ಟಡ ಪ್ರಾರಂಭೋತ್ಸವ ಆ.18 ರಂದು ನಡೆಯಲಿದೆ.

ಬೆಳಿಗ್ಗೆ 8–30 ಕ್ಕೆ ಪುಣ್ಯಾಹ ಗಣಪತಿ ಪೂಜೆ, ಋತ್ವಿಗ್ವರಣನೆ, ಕಲಶ ಸ್ಥಾಪನೆ, ದುರ್ಗಾ ಹೋಮ, ಮಹಾ ಪೂರ್ಣಾಹುತಿ, ಮಹಾಮಂಗಳಾರತಿ ನಂತರ ತೀರ್ಥ ಪ್ರಸಾದ ವಿತರಣೆ.

ಬೆಳಿಗ್ಗೆ 10 ಕ್ಕೆ ಕೋಟಿ ರುದ್ರ ಪಾರಾಯಣ ವೃಂದ, ರುದ್ರ ಪಾರಾಯಣ, ವಿವಿಧ ಭಜನಾ ಮಂಡಳಿ ವತಿಯಿಂದ ಲಲಿತ ಸಹಸ್ರ ನಾಮ ಪಾರಾಯಣ, 11–30 ಕ್ಕೆ ಮಹಾ ಪೂರ್ಣಾಹುತಿ, ಕಬೀರಾನಂದಾಶ್ರಮದ ಶಿವಲಿಂಗಾನಂದ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಪೂಜೆಗೆ ಹೆಸರು ಕೊಡುವವರು ಹೆಚ್ಚಿನ ಮಾಹಿತಿಗಾಗಿ ಮೊ: 9611717758, 9480336862 ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ.

## ತ್ಯಾಗ ಬಲಿದಾನ ಫಲವಾಗಿ ಸ್ವತಂತ್ರ ಬಂದಿದೆ : ಎನ್. ಮಲ್ಲಿಕಾರ್ಜುನ

**ಚಿತ್ರದುರ್ಗ :** ಅಂಬೇಡ್ಕರ್ ಕಲ್ಯಾಣ ಮಂಟಪದ ಹಿಂಭಾಗ ರಾಜೇಂದ್ರನಗರದಲ್ಲಿರುವ ಶ್ರಮಜೀವಿ ಕಟ್ಟಡ ಮತ್ತು ಕೂಲಿ ಕಾರ್ಮಿಕರ ಸೇವಾ ಪಡೆಯ ಕಚೇರಿಯಲ್ಲಿ ಮಂಗಳವಾರ ಭಾರತದ 77 ನೇ ಸ್ವಾತಂತ್ರ್ಯ ದಿನಾಚರಣೆ–ಯ ಅಂಗವಾಗಿ ಧ್ವಜಾರೋಹಣ ನೆರವೇರಿಸಲಾಯಿತು.

ಶ್ರಮಿಜೀವಿ ಕಟ್ಟಡ ಮತ್ತು ಕೂಲಿ ಕಾರ್ಮಿಕರ ಸೇವಾ ಪಡೆಯ ಅಧ್ಯಕ್ಷ ಎನ್.ಮಲ್ಲಿಕಾರ್ಜುನ್ ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತ ರಾಷ್ಟ್ರಪಿತ ಮಹಾತ್ಮಗಾಂಧಿ ನೇತೃತ್ವದಲ್ಲಿ ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ದ ಅನೇಕ ಹಿರಿಯ ಮಹನೀಯರು ಹೋರಾಡಿ ಪ್ರಾಣ ತ್ಯಾಗ ಮಾಡಿದ್ದರ ಫಲವಾಗಿ ಭಾರತ ಸ್ವತಂತ್ರ ದೇಶವಾಗಿದೆ. ದೇಶಕ್ಕಾಗಿ ಹೋರಾಡಿ ಹುತಾತ್ಮರಾದವರ ವಿಚಾರಗಳನ್ನು ಯುವ ಪೀಳಿಗೆ ತಿಳಿದುಕೊಂಡು ದೇಶಭಕ್ತಿಯನ್ನು ಮೆರೆಯಬೇಕೆಂದರು.

ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ ಮಾತನಾಡುತ್ತ ವ್ಯಾಪಾರಕ್ಕಾಗಿ ನಮ್ಮ ದೇಶಕ್ಕೆ ಬಂದ ಬ್ರಿಟೀಷರು ಆಳ್ವಿಕೆ ನಡೆಸಿ ನಮ್ಮವರನ್ನು ಗುಲಾಮರನ್ನಾಗಿ ಮಾಡಿಕೊಂಡು ಇಲ್ಲಿನ ಸಂಪತ್ತನ್ನು ದೋಚಿದರು. ಆಗ ಸಂಗೊಳ್ಳಿರಾಯಣ್ಣ, ಸುಭಾಷ್ ಚಂದ್ರಬೋಸ್, ಲಾಲ್‌ಬಹದ್ದೂರ್ ಶಾಸ್ತ್ರಿ, ಸರ್ದಾರ್ ವಲ್ಲಭಭಾಯಿ ಪಟೇಲ್ ಇನ್ನು ಅನೇಕ ಹಿರಿಯರು ಹೋರಾಡಿ ಪ್ರಾಣಾರ್ಪಣೆ ಮಾಡಿದ ಫಲವಾಗಿ ಭಾರತ 77 ನೇ ಸ್ವಾತಂತ್ರ್ಯವನ್ನು ಆಚರಿಸುತ್ತಿದೆ ಎಂದು ಹೇಳಿದರು.

ಸುರೇಶ್, ಭಜನಾ ಒಕ್ಕೂಟದ ಮುಖ್ಯಸ್ಥರಾದ ನಾಗೇಶಸ್ವಾಮಿ, ಗೋವಿಂದಸ್ವಾಮಿ, ಚಿಕ್ಕಾಲಘಟ್ಟದ ರಂಗಸ್ವಾಮಿ, ಬಿ.ಕೆ.ತಿಪ್ಪೇಸ್ವಾಮಿ, ಕೆ.ಶಿವಕುಮಾರ್, ಸೋಮಶೇಖರ್, ನಾಗರಾಜು, ಮಾರುತಿ, ಪರಮೇಶ್ವರ್, ಹರಿ, ಶ್ರೀಮತಿ ರಾಧ, ಶ್ರೀಮತಿ ವಿನೋದಮ್ಮ, ಶ್ರೀಮತಿ ಲತ ಧ್ವಜಾರೋಹಣದಲ್ಲಿ ಭಾಗವಹಿಸಿದ್ದರು.



ದಿನಾಂಕ: 15/08/2023ರ ಮಂಗಳವಾರದಂದು ನಡೆದ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಶ್ರೀ ಸದ್ಗುರು ಕಬೀರಾನಂದ ಸ್ವಾಮಿ ವಿದ್ಯಾಪೀಠದ ಆಶ್ರಯದಲ್ಲಿನ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾ ಆಡಳಿತ ಚಿತ್ರದುರ್ಗ ಏರ್ಪಡಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ನೆನಪಿನ ಕಾಣಿಕೆ ಹಾಗೂ ಪ್ರಶಸ್ತಿ ಪತ್ರವನ್ನು ಪಡೆದಿರುತ್ತಾರೆ. ಭಾಗವಹಿಸಿದ ತಂಡವನ್ನು ವಿದ್ಯಾಪೀಠದ ಅಧ್ಯಕ್ಷರಾದ ಪರಮ ಪೂಜ್ಯ ಶ್ರೀ ಶ್ರೀ ಶ್ರೀ ಶಿವಲಿಂಗಾನಂದ ಮಹಾಸ್ವಾಮೀಜಿಯವರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿರುತ್ತಾರೆ.

# ಟ್ರಾನ್ಸ್‌ಫಾರ್ಮರ್ ರಿಪೇರಿಗೆ ಒತ್ತಾಯಿಸಿ ಪ್ರತಿಭಟನೆ




**ಚಳ್ಳಕೆರೆ :** ತಳಕು ಬೆಸ್ಕಾಂ ವಿಭಾಗದಲ್ಲಿ ಕಳೆದ ಸುಮಾರು ಎರಡು ತಿಂಗಳಿನಿಂದ ಗ್ರಾಮೀಣ ಪ್ರದೇಶದಲ್ಲಿರುವ ಟ್ರಾನ್ಸ್‌ಫಾರ್ಮಗಳಲ್ಲಿ ಸರಿಯಾಗಿ ಕಾರ್ಯನಿರ್ವಹಿಸದೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದ್ದು, ಸದರಿ ಟ್ರಾನ್ಸ್‌ಫಾರ್ಮಗಳನ್ನು ರೀಪೆರಿ ಗೊಳಿಸಬೇಕು, ಇಲ್ಲ ಬದಲಾಯಿಸಿ ರೈತ ಸಮುದಾಯಕ್ಕೆ ನಿರಂತರ ವಿದ್ಯುತ್ ಸಂಪರ್ಕ ನೀಡಬೇಕೆಂದು ಒತ್ತಾಯಿ ರಾಜ್ಯ ರೈತ ಸಂಘ ಉಪಾಧ್ಯಕ್ಷ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.

ಮನವಿ ಅರ್ಪಿಸಿ ಪ್ರತಿಭಟನಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ತಳಕು ಬೆಸ್ಕಾಂ ವಿಭಾಗದಲ್ಲಿ ಸುಮಾರು ನೂರಕ್ಕೂ ಹೆಚ್ಚು ಟ್ರಾನ್ಸ್‌ಫಾರ್ಮಗಳಿದ್ದು ಎಲ್ಲಾ ಟ್ರಾನ್ಸ್‌ಫಾರ್ಮಗಳು ಹಳೇದಾಗಿ ಅವುಗಳ ಸುತ್ತಮುತ್ತ ಮುಳ್ಳಿನ ಗಿಡ, ಬಳ್ಳಿ ಬೆಳೆದು ಅಪಾಯವನ್ನುಂಟು ಮಾಡುವ ಸ್ಥಿತಿ ತಲುಪಿವೆ. ಯಾವುದೇ ರಕ್ಷಣೆ ಇರುವುದಿಲ್ಲ. ಟ್ರಾನ್ಸ್‌ಫಾರ್ಮಗಳು ಕೆಲವೊಂದು ಕಡೆ ಕೈಗೆಟಗುವ ಸ್ಥಿತಿಯಲ್ಲಿವೆ. ಆದ್ದರಿಂದ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಇಂತಹ ಟ್ರಾನ್ಸ್‌ಫಾರ್ಮಗಳನ್ನು ಬದಲಾಯಿಸಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಳಕು ಎಇಇ ತಿಮ್ಮರಾಜು, ಶಿಥಿಲಗೊಂಡ ಟ್ರಾನ್ಸ್‌ಫಾರ್ಮರ್ ರಿಪೇರಿ ಹಾಗೂ ಬದಲಾವಣೆ ಕುರಿತಂತೆ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದೆ. ಸದ್ಯದ ಸ್ಥಿತಿಯಲ್ಲಿ ಎಲ್ಲಾ ಟ್ರಾನ್ಸ್‌ಫಾರ್ಮರ್ ಕಾರ್ಯನಿರ್ವಹಿಸುತ್ತಿವೆ. ವಿದ್ಯುತ್ ಸರಬರಾಜಿಗೆ ಅಡಚಣೆ ಮಾಡುವ ಉದ್ದೇಶ ಇಲಾಖೆಗೆ ಇಲ್ಲ. ಆದರೂ ಇಲಾಖೆ ಅಧಿಕಾರಿಗಳಿಗೆ ಪತ್ರಬರೆದು ಸಮಸ್ಯೆ ಬಗೆಹರಿಸಿಕೊಡುವ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ತಾಲ್ಲೂಕು ಅಧ್ಯಕ್ಷ ಚಂದ್ರಶೇಖರ್‌ನಾಯ್ಕ, ಗಂಗಾಧರ, ಹನುಮಂತರೆಡ್ಡಿ, ನಿಂಗಪ್ಪ, ಈರಣ್ಣ, ನಾಗರಾಜು ಮುಂತಾದವರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T